ಗುರುವಾರ, 18.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 116
Digital Varthe Kannada Daily
Volume 01 - Issue 116
Thursday 18.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಪತ್ನಿಯ ವಿಷಯವೇ ಕಾರಣ: ತೋಟದಲ್ಲಿ ತಮ್ಮನ ಹತ್ಯೆ ನಡೆಸಿದ ಅಣ್ಣ



**ಶಿವಮೊಗ್ಗ**: ಅತ್ತಿಗೆ ಜೊತೆಗಿನ ಅನೈತಿಕ ಸಂಬಂಧಕ್ಕೆ ವ್ಯಕ್ತಿಯೋರ್ವ ಅಣ್ಣನಿಂದಲೇ ಕೊಲೆಯಾಗಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಸೊರಬ ತಾಲೂಕಿನ ಜೇಡಿಗೆರೆ ಗ್ರಾಮದಲ್ಲಿ ನಡೆದಿದೆ. ರಾಮಚಂದ್ರ (28) ಕೊಲೆಯಾದ ವ್ಯಕ್ತಿಯಾಗಿದ್ದು, ಆತನ ಸಹೋದರ ಮಾಲ ತೇಶನೇ ಆರೋಪಿಯಾಗಿದ್ದಾನೆ. ಮಿಸ್ಸಿಂಗ್ ಕೇಸ್ ಬೆನ್ನತ್ತಿ ತನಿಖೆ ನಡೆಸಿದ ಪೊಲೀಸರು ತಮ್ಮನನ್ನು ಕೊಂದು ಅಮಾಯಕನಂತೆ ನಟಿಸುತ್ತಿದ್ದ ಅಣ್ಣನ ಕಳ್ಳಾಟವನ್ನು ಕುಟುಂಬದ ಎದುರು ಬಹಿರಂಗಪಡಿಸಿದ್ದಾರೆ. ಒಂದೂವರೆ ತಿಂಗಳ ಹಿಂದೆ ನಾಪತ್ತೆಯಾಗಿದ್ದ ರಾಮಚಂದ್ರ ಬಗ್ಗೆ ಸೊರಬ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಸಂಬಂಧ ಪೊಲೀಸರು ತನಿಖೆಗೆ ಮುಂದಾದಾಗ ಕೇಸ್‌ಗೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಪತ್ನಿ ಜೊತೆಗಿನ ಅನೈತಿಕ ಸಂಬಂಧ ಕಾರಣ ರಾಮಚಂದ್ರನನ್ನು ಕೊಂದ ಮಾಲತೇಶ್ , ಆತನನ್ನು ತೋಟದಲ್ಲಿ ಹೂತು ಹಾಕಿರೋದು ಗೊತ್ತಾಗಿದೆ. ಮಾಹಿತಿಯ ಆಧಾರದಲ್ಲಿ ತೋಟದಲ್ಲಿ ಗುಂಡಿ ತೆಗೆದು ಪರಿಶೀಲನೆ ನಡೆಸಿದಾಗ ರಾಮಚಂದ್ರನ ಶವ ಪತ್ತೆಯಾಗಿದೆ.

ಪಕ್ಕಾ ಪ್ಲ್ಯಾನ್ ಮಾಡಿ ಮರ್ಡರ್

ಹೆಂಡತಿ ಜೊತೆಗೆ ತಮ್ಮ ರಾಮಚಂದ್ರನ ಅಕ್ರಮ ಸಂಬಂಧ ವಿಷಯಕ್ಕೆ ಅಣ್ಣ ಮಾಲತೇಶ್ ಸಿಟ್ಟಾಗಿದ್ದ. ಹೀಗಾಗಿ ಆತನ ಕೊಲೆಗೆ ಪ್ಲ್ಯಾನ್ ಮಾಡಿದ್ದ ಈತ, ಬೇಗ ಮದುವೆಯಾಗಲೆಂದು ಪೂಜೆ ನೆಪದಲ್ಲಿ ಜೇಡಿಗೆರೆ ಬಳಿ ತಾನು ಕೆಲಸ ಮಾಡುತ್ತಿದ್ದ ತೋಟಕ್ಕೆ ರಾಮಚಂದ್ರನನ್ನು ಕರೆದುಕೊಂಡು ಹೋಗಿದ್ದ. ಪೂಜೆ ನೆಪದಲ್ಲಿ ತಮ್ಮನಿಗೆ ಸರಿಯಾಗಿ ಮದ್ಯ ಕುಡಿಸಿ, ನಂತರ ಕಂಬಕ್ಕೆ ಕಟ್ಟಿ ಆತನ ಕುತ್ತಿಗೆ ಹಿಸುಕಿ ಕೊಲೆ ಮಾಡಿದ್ದ. ಕೊಲೆಗೂ ಮೊದಲೇ ಶವ ಹೂತು ಹಾಕಲು ಗುಂಡಿ ತೋಡಿ ಇಟ್ಟಿದ್ದ. ಬಳಿಕ ಯಾರಿಗೂ ಗೊತ್ತಾಗದಂತೆ ಶವವನ್ನು ಗುಂಡಿಯಲ್ಲಿ ಹೂತು ಹಾಕಿದ್ದ. ರಾಮಚಂದ್ರ ನಾಪತ್ತೆ ಬಗ್ಗೆ ಕುಟುಂಬ ಆತಂಕದಲ್ಲಿದ್ದರೂ ತಾನು ಅಮಾಯಕ ಎಂಬ ರೀತಿ ಓಡಾಡಿಕೊಂಡಿದ್ದ. ಆದರೆ ಮೊಬೈಲ್ ಟವರ್ ಲೊಕೇಶನ್ ಆಧಾರದಲ್ಲಿ ಪೊಲೀಸರು ತನಿಖೆ ನಡೆಸಿದಾಗ ಕೊಲೆ ವಿಚಾರ ಗೊತ್ತಾಗಿದೆ.

## ರೈಲಿಗೆ ತಲೆಕೊಟ್ಟು ಪ್ರಾಣಬಿಟ್ಟ ಯುವತಿ; ಸಿಕ್ಕಿದ್ದು ಎರಡೆರಡು ಡೆತ್‌ನೋಟ್



**ಧಾರವಾಡ:** ಚಲಿಸುತ್ತಿದ್ದ ರೈಲಿಗೆ ತಲೆ ಕೊಟ್ಟು ಯುವತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಧಾರವಾಡದ ಕ್ಯಾರಕೊಪ್ಪ ರೈಲ್ವೆ ಗೇಟ್ ಬಳಿ ನಡೆದಿದೆ. ಬಳ್ಳಾರಿ ಮೂಲದ ಪಲ್ಲವಿ(24) ಆತ್ಮಹತ್ಯೆಗೆ ಶರಣಾದ ಯುವತಿಯಾಗಿದ್ದು ,ಸ್ಪರ್ಧಾತ್ಮಕ ಪರೀಕ್ಷೆ ಸಿದ್ಧತೆಗಾಗಿ ಧಾರವಾಡಕ್ಕೆ ಬಂದಿದ್ದಳು ಎನ್ನಲಾಗಿದೆ. ಯುವತಿಯ ಸಾವಿನ ಬಗ್ಗೆ ಅನುಮಾನ ವ್ಯಕ್ತವಾದ ಹಿನ್ನೆಲೆ ಪರೀಕ್ಷಿಸಿದಾಗ ಆಕೆಯ ಪ್ಯಾಂಟ್ ಕಿಸೆಯಲ್ಲಿ ಡೆತ್‌ನೋಟ್ ಪತ್ತೆಯಾಗಿದೆ. ಎರಡು ಡೆತ್‌ನೋಟ್ ಪತ್ತೆ

ಮೃತ ಪಲ್ಲವಿಯ ಪ್ಯಾಂಟ್ ಕಿಸೆಯಲ್ಲಿ ಎರಡು ಪುಟಗಳ ಡೆತ್‌ನೋಟ್ ಪತ್ತೆಯಾಗಿದ್ದು , ಅದರಲ್ಲಿ ತಂದೆ-ತಾಯಿ ಬಗ್ಗೆ ಆಕೆ ಅಸಮಾ ಧಾನ ವ್ಯಕ್ತಪಡಿಸಿದ್ದಾಳೆ. ನನಗೆ ಯಾವತ್ತೂ ನೀವು ಪ್ರೀತಿ ನೀಡಿಲ್ಲ. ಹಾಸ್ಟೆಲ್‌ನಲ್ಲೇ ನನ್ನ ಬೆಳೆಸಿದ್ದೀರಿ. ನನ್ನ ಬೇಕು ಮತ್ತು ಬೇಡಗಳನ್ನು ನೀವು ಕೇಳದ ಕಾರಣ ನಾನು ನೋವುಂಡಿದ್ದೇನೆ ಎಂದು ಬರೆದಿರೋದು ಕಂಡುಬಂದಿದೆ. ಮತ್ತೊಂದು ಡೆತ್‌ನೋಟ್ ಆಕೆಯ ರೂಮಿನಲ್ಲಿ ಸಿಕ್ಕಿದ್ದು , ಅದರಲ್ಲಿ ಪ್ರೀತಿಸುತ್ತಿದ್ದ ಯುವಕನ ಬಳಿ ಪಲ್ಲವಿ ಕ್ಷಮೆ ಕೇಳಿದ್ದಾಳೆ. ನಮ್ಮವರು ನಿನ್ನೊಡನೆ ಬದುಕಲು ಅವಕಾಶ ಕೊಡಲಿಲ್ಲ.

ಇದರಿಂದಾಗಿ ನನ್ನ ಮನಸ್ಸಿಗೆ ನೋವಾಗಿದೆ. ನನ್ನನ್ನು ನೀನು ಕ್ಷಮಿಸು, ಈ ನನ್ನ ಸಾವಿಗೆ ನಾನೇ ಕಾರಣ ಎಂದು ಪಲ್ಲವಿ ಸ್ಪಷ್ಟವಾಗಿ ತಿಳಿಸಿದ್ದಾಳೆ.

ಪಲ್ಲವಿ ಮತ್ತು ಬಳ್ಳಾರಿ ತಾಲೂಕಿನ ದಮ್ಮೂರು ಕಗ್ಗಲ್ಲು ಗ್ರಾಮದ ನಿವಾಸಿ ಯುವಕ ಪ್ರೀತಿಸುತ್ತಿದ್ದರು. ಈ ವಿಷಯವನ್ನು ಪಲ್ಲವಿ ಮನೆಯಲ್ಲೂ ಇವರು ಪ್ರಸ್ತಾಪಿಸಿದ್ದು , ಆ ವೇಳೆ ಕುಟುಂಬ ಇದಕ್ಕೆ ವಿರೋಧ ವ್ಯಕ್ತಪಡಿಸಿತ್ತು. ಅಲ್ಲದೆ, ತಾಯಿಯ ಸಂಬಂಧಿಕರೊಬ್ಬರ ಜೊತೆ ಪಲ್ಲವಿಯ ಮದುವೆ ನಿಶ್ಚಯ ಕೂಡ ಮಾಡಲಾಗಿತ್ತು. ಹೀಗಾಗಿ ಆಕೆ ಬಹಳ ನೊಂದಿದ್ದಳು ಎಂಬ ವಿಷಯ ಕೂಡ ತನಿಖೆ ವೇಳೆ ಗೊತ್ತಾಗಿದೆ. 'ಅಪಪ್ರಚಾರ ಮಾಡಿದ್ರೆ ಕಠಿಣ ಕ್ರಮ' ಇನ್ನು ಘಟನೆ ಸಂಬಂಧ ಹುಬ್ಬಳ್ಳಿಯಲ್ಲಿ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಪ್ರತಿಕ್ರಿಯಿಸಿದ್ದಾರೆ. ವೈಯಕ್ತಿಕ ಕಾರಣಕ್ಕಾಗಿ ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

ಆದರೆ ನೇಮಕಾತಿ ಪ್ರಕ್ರಿಯೆ ಆಗದಿರೋದಕ್ಕೆ ಪಲ್ಲವಿ ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ಅಪಪ್ರಚಾರ ಮಾಡಲಾಗ್ತಿದೆ. ಪಲ್ಲವಿ ಸಾವಿಗೂ ಉದ್ಯೋಗ ವಿಚಾರಕ್ಕೂ ಯಾವುದೇ ಸಂಬಂಧವಿಲ್ಲ. ಆಕೆಯ ಜೇಬಿನಲ್ಲಿ ಎರಡು ಡೆತ್‌ನೋಟ್‌ಗಳು ಪತ್ತೆಯಾಗಿವೆ. ವೈಯಕ್ತಿಕ ವಿಚಾರಕ್ಕೆ ಆತ್ಮಹತ್ಯೆ ಎಂದು ಅದರಲ್ಲಿ ಉಲ್ಲೇಖಿಸಿರುವ ಕಾರಣ, ಅಪಪ್ರಚಾರ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಯುವತಿ ಆತ್ಮಹತ್ಯೆಗೆ ಬೇರೆ ಬಣ್ಣ ಕಟ್ಟುವ ಕೆಲಸ ಮಾಡಬಾರದು ಎಂದಿದ್ದಾರೆ.

## ಇಂಡಿಯನ್ ಅಂಧರ ಕ್ರಿಕೆಟ್ ತಂಡದ ಆಟಗಾರರಿಗೆ 'ನಮ್ಮ ಸಂತ'ದಲ್ಲಿ ಸನ್ಮಾನ



**ದಾಸರಹಳ್ಳಿ:** ಕಳೆದ ಕೆಲ ವರ್ಷಗಳಲ್ಲಿ ನಡೆದ ಅನೇಕ ವಿಶ್ವಕಪ್ ಚಾಂಪಿಯನ್‌ಶಿಪ್ ಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಇಂಡಿಯನ್ ಅಂಧರ ಕ್ರಿಕೆಟ್ ತಂಡದ ಆಟಗಾರರಾದ ಪ್ರೇಮ್ ಕುಮಾರ್ ಮತ್ತು ಲೋಕೇಶ ಅವರನ್ನು ಜಾಲಹಳ್ಳಿಯ ಸೆಂಟ್ ಕ್ಲಾರೆಟ್ ಪಿಯು ಕಾಲೇಜಿನಲ್ಲಿ ನಡೆದ ರಾಜ್ಯದ ಅತಿದೊಡ್ಡ ಚಾರಿಟಿ ಕಾರ್ಯಕ್ರಮವಾದ 'ನಮ್ಮ ಸಂತ"ದಲ್ಲಿ ಸನ್ಮಾನಿಸಲಾಯಿತು.

ಇದೇ ವೇಳೆ ಈ ಕ್ರೀಡೆಗೆ ಖಾಸಗಿ ಮತ್ತು ಸರ್ಕಾರಿ ಸಂಸ್ಥೆಗಳು ಹೆಚ್ಚಿನ ಪ್ರೋತ್ಸಾಹ ನೀಡಬೇಕೆಂದು ಆಟಗಾರರು ಮನವಿ ಮಾಡಿದರು. ಸೆಂಟ್ ಕ್ಲಾರೆಟ್ ಸಂಸ್ಥೆ ಮತ್ತು ಪ್ರಮುಖ ಎನ್‌ಜಿಒ ಡೀಮ್ ಇಂಡಿಯಾ ನೆಟ್‌ವರ್ಕ್ ಜಂಟಿಯಾಗಿ ಬಡವರ್ಗದವರಿಗೆ ಮತ್ತು ಬ್ಯಾಪ್ಟಿಸ್ಟ್ ಆಸ್ಪತ್ರೆಯ ಕ್ಯಾನ್ಸರ್ ರೋಗಿಗಳಿಗೆ 11 ಲಕ್ಷದ 75 ಸಾವಿರ ದೇಣಿಗೆಯನ್ನು ನೀಡಿದರು. ಕಾರ್ಯಕ್ರಮದಲ್ಲಿ ಫಾ. ಎಡ್ವರ್ಡ್ ಥಾಮಸ್, ಕಾರ್ಯನಿರ್ವಾಹಕ ನಿರ್ದೇಶಕ ಜೇಕಬ್ ಚಾಕೋ, ಫಾ. ಮೈಕೆಲ್ ಡಿಸೋಜಾ, ಪ್ರಾಂಶುಪಾಲರು ಮತ್ತು ಕಾಲೇಜಿನ ಸಿಬ್ಬಂದಿ ಭಾಗವಹಿಸಿದ್ದರು.

## ರೈತ ವಿರೋಧಿ ಕಾಯ್ದೆಗಳನ್ನು ಸರ್ಕಾರ ವಾಪಸ್ ಪಡೆಯುವಂತೆ ರೈತರು ಹಾಗೂ ಪ್ರಗತಿಪರ ಸಂಘಟನೆಗಳು ಪ್ರತಿಭಟನೆ



**ದೇವನಹಳ್ಳಿ** :- ಬಗರ್ ಹುಕುಂ ಸಕ್ರಮಕ್ಕಾಗಿ ರೈತರು ಅರ್ಜಿ ಸಲ್ಲಿಸಿ, ಅನೇಕ ವರ್ಷಗಳು ಕಳೆದರೂ..ಈವರೆಗೆ ರೈತರಿಗೆ ಭೂಮಿ ಮಂಜೂರಾತಿ ಆಗಿಲ್ಲ. ಅರ್ಜಿ ಸಲ್ಲಿ ಸಿದ ರೈತರಿಗೆ ಬಗರ್ ಹುಕುಂ ಮಂಜೂರಾತಿ ಪತ್ರ ಗಳನ್ನು ವಿತರಿಸಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ಕನ್ನಡ ಪ್ರಜಾ ರಕ್ಷಣಾ ವೇದಿಕೆ ಸರ್ಕಾರ ವನ್ನು ಆಗ್ರಹಿಸಿದರು.

ದೇವನಹಳ್ಳಿ ತಾಲ್ಲೂಕು ಸಮಿತಿಯ ಕರ್ನಾಟಕ ಪ್ರಾಂತ ರೈತ ಸಂಘ ಕನ್ನಡ ಪ್ರಜಾ ರಕ್ಷಣಾ ವೇದಿಕೆ ಜಂಟಿಯಾಗಿ ರಾಜ್ಯಾದ್ಯಾಂತ ಜನಾಂದೋಲನದ ಮೂಲಕ ಬೆಂಗ ಳೂರು ಬೃಹತ್ ಮಟ್ಟದಲ್ಲಿ ಬಹಿರಂಗ ಸಭೆಯನ್ನು ಕರೆದ ಸಂಬಂಧ ಪತ್ರಿಕಾ ಘೋಷ್ಠಿಯಲ್ಲಿ ವೇದಿಕೆ ರಾಜ್ಯಾಧ್ಯಕ್ಷ ಮೋಹನ್ ಬಾಬು ಮಾತನಾಡಿದರು.

ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಈರಣ್ಣ ಮಾತನಾಡಿ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಗರ್ ಹುಕಂ ಸಾಗುವಳಿ ಮಾಡುತ್ತಿರುವ ಕೃಷಿಕ ಪರಿಹಾರ ಕೊಡ ಬೇಕು. ಬಗರ್ ಹುಕಂ ಸಾಗುವಳಿ ಮಾಡುತ್ತಿರುವ ರೈತರಿಗೆ ಬೆಂಗಳೂರು ಮಹಾನಗರ ಪಾಲಿಕೆ ನಿಂದ18 ಕಿಲೋ ಮೀಟರ್, ನಗರ ತಹಸೀಲ್ದಾರ್ ರವರು ಬಗರ್ ಹುಕಂ ಸಾಗುವಳಿ ಜಮೀನನ್ನು ತೆರವುಗೊಳಿಸು ವುದನ್ನು ಕೂಡಲೇ ರದ್ದುಪಡಿಸಬೇಕು

ಪಾಲಿಕೆ 10 ಕಿಲೋಮೀಟರ್, ಪಂಚಾಯಿತಿ, ಪಟ್ಟಣ 5 ಕಿಲೋಮೀಟರ್ ಗ ಳ ನ್ನು ಕೂ ಡ ಲೇ ರದ್ದುಪಡಿಸಬೇಕು. ದರಖಾಸ್ತು ಜಮೀನು ಕೂಡಲೇ ಮಂಜೂರು ಮಾಡಿ ರೈತರಿಗೆ ಸಾಗುವಳಿ ಚೀಟಿ ಕೊಡಬೇಕು. ರೈತರಿಗೆ ಸರ್ಕಾರದಿಂದ ಯಾವುದೇ ಪರಿಹಾರ ಕೊಟ್ಟಿರುವುದಿಲ್ಲ. ಬಡಕುಟುಂಬಗಳು ವಾಸ ಮಾಡಲು ಮನೆಗಳು ಮತ್ತು ನಿವೇಶನ ಇಲ್ಲದೇ ಬಹಳ ತೊಂದರೆಯಾಗಲಿದೆ.

ಸರ್ಕಾರದಿಂದ ಬಡವರಿಗೆ ನಿವೇಶನವನ್ನು ಕೊಟ್ಟು ಮನೆ ಕಟ್ಟಿಕೊಡುವ ಮೂಲಕ ಅವರಿಗೆ ನೆಮ್ಮದಿಯಾಗಿ ವಾಸ ಮಾಡಲು ಸರ್ಕಾರ ಅವಕಾಶ ಮಾಡಿಕೊಡಬೇಕು. ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ, ದೊಡ್ಡ ತತ್ತಮಂಗಲ, ಗುಡುವನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಗೋಮಾಳ ಸುಮಾರು 600 ಏಕರೆ ಜಮೀನು ಇದ್ದು , ಇದರಲ್ಲಿ ತಹಶೀಲ್ದಾರ್ ಅವರು ಅರಣ್ಯ ಇಲಾಖೆಗೆ 250 ಏಕರೆ ಕೊಟ್ಟಿದ್ದು , ಇನ್ನು ಉಳಿದ ಸುಮಾರು 351 ಏಕರೆ ಜಮೀನು ಉಳಿದಿದ್ದು , ಅರಣ್ಯ ಇಲಾಖೆ ಯವರು ಆಕ್ರಮಿಸಿಕೊಂಡಿದ್ದು , ಈ ಜಮೀನು ಬಿಡಿಸಿ ಅಳತೆ ಮಾಡಿ, ಸರ್ವೆ ಮಾಡಿ ಬಡವರಿಗೆ ನಿವೇಶನ ಹಂಚಿಕೆ ಮಾಡಿಕೊಡಬೇಕು. ದರಖಾಸ್ತು ಸ್ವತ್ತುಗಳನ್ನು ಸರ್ವೆ ಮಾಡಿ ಆದಾಲತ್ ಒಂದು ತಂಡ ಮಾಡಿ ಕೂಡಲೇ ಸರ್ಕಾರದಿಂದ ಸರ್ವೆ ನೋಡಿ ಮಾಡಬೇಕು.

ಕನ್ನಡ ಪ್ರಜಾ ರಕ್ಷಣಾ ವೇದಿಕೆ ಪ್ರಾಂತ ರೈತ ಸಂಘ ರಾಜ್ಯಾಧ್ಯಕ್ಷ ಡಾ||ಮೋಹನ್ ಬಾಬು, ಉಪಾಧ್ಯಕ್ಷ ಪ್ರದೀಪ್ ಕುಮಾರ್,ಪ್ರಧಾನ ಕಾರ್ಯದರ್ಶಿ ರಮೇಶ್ ಬಾಬು, ಖಜಾಂಚಿ ರಾಘವ ಎ, ಜಂಟಿ ಕಾರ್ಯದರ್ಶಿ ಎಸ್. ಮಂಜುನಾಥ್, ಸಂಘಟನಾ ಕಾರ್ಯದರ್ಶಿ ಅರುಣ್ ಕುಮಾರ್, ಕಾರ್ಯಕಾರಿ ಸಮಿತಿ ಪದಾದಿ ಕಾರಿಗಳಾದ ಅರುಣ್, ಮುರುಗೇಶ್, ವೆಂಕಟೇಶ್, ಎಚ್. ಶ್ರೀನಿವಾಸ್, ಮಹೇಶ್ ಬಾಬು, ಜಿ.ನಾರಾಯಣ ಸ್ವಾಮಿ, . ಎಸ್. ಮಂಜುನಾಥ್, ಎಚ್. ವೆಂಕಟೇಶ್, ಮುನಿರಾಜು, ಗೋವಿಂದರಾಜು ಕಾನೂನು ಸಲಹೆಗಾರರು ನಾಗರಾಜು, ನರಸಿಂಹ ಮೂರ್ತಿ, ವೆಂಕಟರಾಜು .ಎಂಸಹಾಯಕ ಕಾರ್ಯದರ್ಶಿ ಎಂ.ಪ್ರಭು, ಪ್ರಧಾನ ಕಾರ್ಯದರ್ಶಿ ಮಧು.ಎನ್, ಹಾಜರಿದ್ದರು. ಇದೆ ವೇಳೆ ರೈತರ ಹೋರಾಟದ ಅನುಕೂಲಕ್ಕಾಗಿ 25000 ಚೆಕ್ಕನ್ನು ಮೋಹನ್ ಕುಮಾರ್ ಅವರ ತಂಡ ನೀಡಿ ಗೌರವಿಸಿದರು.

## ಕೇಂದ್ರ ಸಚಿವ ಕುಮಾರಸ್ವಾಮಿ ಜನ್ಮದಿನ: ಪಟ್ಟಣದಲ್ಲಿ ಮುಗಿಲು ಮುಟ್ಟಿದ ಸಂಭ್ರಮ



ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳು ಹಾಗೂ ಭಾರತ ಸರ್ಕಾರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್. ಡಿ. ಕುಮಾರಸ್ವಾಮಿ ಅವರ 66ನೇ ಹುಟ್ಟುಹಬ್ಬದ ಅಂಗವಾಗಿ ಜೆಡಿಎಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಟ್ಟಣದ ದುಂಡಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿ ಕೇಕತ್ತರಿಸಿ ಸಂಭ್ರಮಿಸಿದರು,

ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾಗಿ ನೂರಾರು ಜನಪರವಾದ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಿ ಮುಖ್ಯಮಂತ್ರಿ ಸ್ಥಾನದ ಘನತೆಗೆ ಗೌರವ ವನ್ನು ತಂದುಕೊಟ್ಟ ಕೇಂದ್ರದ ಸಚಿವರಾದ ಎಚ್ ಡಿ ಕುಮಾರಸ್ವಾಮಿ ಅವರು ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದರಾಗಿ, ಭಾರೀ ಕೈಗಾರಿಕೆ ಸಚಿವರಾಗಿ ಇಡೀ ದೇಶವೇ ಮೆಚ್ಚುವಂತೆ ದಕ್ಷ ಪ್ರಾಮಾಣಿಕ ಆಡಳಿತ ನೀಡುತ್ತಿದ್ದಾರೆ. ಮಾತೃ ಹೃದಯಿಗಳಾದ ಕುಮಾರಸ್ವಾಮಿಯವರು ನೂರು ಕಾಲ ಆರೋಗ್ಯವಂತರಾಗಿ ನೆಮ್ಮದಿಯ ಜೀವನವನ್ನು ನಡೆಸುವಂತೆ ದಯಾಮಯನಾದ ಭಗವಂತ ಹಾಗೂ ತಾಯಿ ಚೌಡೇಶ್ವರಿ ದೇವಿಯು ಅನುಗ್ರಹಿಸಿ ಆಶೀರ್ವದಿಸಲಿ ಎಂದು ಪ್ರಾರ್ಥಿಸಿ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿ ಶೀಘ್ರವೇ ಗುಣಮುಖ ರಾಗುವಂತೆ ಹಾರೈಸಿದರು.

ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಹೊನ್ನೇನಹಳ್ಳಿ ಮೋಹನ್, ಟಿಎಪಿಸಿಎಂಎಸ್ ಅಧ್ಯಕ್ಷ ಟಿ.ಬಲದೇವ್, ಶಾಸಕರ ಸಹೋದರ ಹೆಚ್.ಟಿ. ಲೋಕೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ಐನೋರಹಳ್ಳಿ ಮಲ್ಲೇಶ್, ವಳಗೆರೆಮೆಣಸದ ಮಹದೇವೇ ಗೌಡ, ವಿ.ಎಸ್. ಧನಂಜಯ್ ಕುಮಾರ್, ಬೇಲದಕೆರೆ ನಂಜೇಗೌಡ, ತೋಟಪ್ಪಶೆಟ್ಟಿ , ಕೆ.ಆರ್.ಹೇಮಂತಕುಮಾರ್, ವಡ್ಡರಹಳ್ಳಿ ಮಹದೇವೇಗೌಡ, ದೊಡ್ಡಗಾಡಿಗನಹಳ್ಳಿ ಕುಮಾರ್, ವಕೀಲ ಕುರುಬಹಳ್ಳಿ ನಾಗೇಶ್, ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಮಂಜುಳಾ ಸೇರಿದಂತೆ ನೂರಾರು ಅಭಿಮಾನಿಗಳು ಹಾಗೂ ಪಕ್ಷದ ಕಾರ್ಯಕರ್ತರು ಮುಖಂಡರು ಹುಟ್ಟು ಹಬ್ಬದ ಸಂಭ್ರಮದಲ್ಲಿ ಭಾಗಿಯಾಗಿ ಕೇಕ್ ಕತ್ತರಿಸಿ ಸಂಭ್ರಮಿಸಿದರು.

## ವಿಠಲಾಪುರ ಸರ್ಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಷನ್ ಕ್ಲಾಸ್:



ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ - ಕಿಕ್ಕೇರಿ ಕಸಬಾ ವಲಯದ ವಿಠಲಾಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಷನ್ ಕ್ಲಾಸ್ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ತಾಲೂಕು ಯೋಜನಾಧಿಕಾರಿಗಳಾದ ಪ್ರಸಾದ್ ಅವರು ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಎಸ್‌ಎಸ್‌ಎಲ್‌ಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕವಾದ ಶಿಕ್ಷಣ ಸಹಾಯ ನೀಡುವ ನಿಟ್ಟಿನಲ್ಲಿ ರಾಜ್ಯವ್ಯಾಪಿಯಾಗಿ ಈ ಟ್ಯೂಷನ್ ಕ್ಲಾಸ್ ಯೋಜನೆಯನ್ನು ಪೂಜ್ಯರಾದ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಇದರಿಂದ ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಲು ಸಹಕಾರಿಯಾಗಲಿದೆ ಎಂದರು. ಅದೇ ಸಂದರ್ಭದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಪರಿಸರ ಸಂರಕ್ಷಣೆ, ಸ್ವಚ್ಛತಾ ಅಭಿಯಾನ, ಸ್ವಾಸ್ಥ್ಯ ಸಂಕಲ್ಪ, ಜ್ಞಾನದೀಪ, ಶಿಕ್ಷಕರ ಸಹಕಾರ ಸೇರಿದಂತೆ ಹಲವಾರು ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದು ವಿವರಿಸಿದರು.

ಶಾಲಾ ಮುಖ್ಯ ಶಿಕ್ಷಕರಾದ ಶಂಕರ್ ಅವರು ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಯಿಂದ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಜೊತೆಗೆ ಅಗತ್ಯ ಮಾರ್ಗದರ್ಶನ ದೊರೆಯುತ್ತಿದೆ. ಮುಂದಿನ ವರ್ಷ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಬೇಕೆಂದು ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಕಾಲೇಜು ಪ್ರಾಂಶುಪಾಲರಾದ ಮಲ್ಲಿಕಾರ್ಜುನ್, ವಲಯದ ಮೇಲ್ವಿಚಾರಕಿ ಗುಣಶ್ರೀ, ಶಾಲಾ ಶಿಕ್ಷಕರಾದ ಯೋಗೇಶ್, ಸುಚಿತ್ರ, ಸುಪ್ರೀತಾ, ಸೇವಾ ಪ್ರತಿನಿಧಿಗಳಾದ ಶ್ವೇತ, ಜೀವಿತ, ಶಶಿಕಲಾ ಸೇರಿದಂತೆ ಹಲವರು ಉಪಸ್ಥಿತರಿದ್ದರು,

## ಇನ್ಸ್‌ಪೆಕ್ಟರ್‌ಗೆ ಅಚ್ಚರಿ: 'ಪ್ರೀತ್ಸೋ' ಎಂದ ಲವ್ ಲೆಟರ್ ವೈರಲ್

ಪ್ರೇಮದ ಹೆಸರಿನಲ್ಲಿ ಒಬ್ಬ ಪೊಲೀಸ್ ಅಧಿಕಾರಿಯನ್ನು ಕಾಟ ಕೊಡುವ ಕಥೆಯೊಂದು ಇತ್ತೀಚೆಗೆ ಬೆಂಗಳೂರಿನ ರಾಮಮೂರ್ತಿನಗರ ಪೊಲೀಸ್ ಠಾಣೆಯಲ್ಲಿ ನಡೆದಿದೆ. ಸಂಜನಾ ವನಜಾ ಎಂಬ ಮಹಿಳೆಯು ರಾಮಮೂರ್ತಿನಗರ ಪೊಲೀಸ್ ಇನ್ಸ್‌ಪೆಕ್ಟರ್ ಸತೀಶ್ ಅವರನ್ನು ತನ್ನ ಪ್ರೇಮದ ಜಾಲಕ್ಕೆ ಬೀಳಿಸಲು ಹಲವು ವಿಚಿತ್ರ ಕ್ರಮಗಳನ್ನು ಕೈಗೊಂಡಿದ್ದಳು. ಲವ್ ಲೆಟರ್‌ಗಳು, ರಕ್ತದಲ್ಲಿ ಬರೆದ ಪತ್ರಗಳು, ಸೂಸೈಡ್ ಬೆದರಿಕೆಗಳು ಮತ್ತು ರಾಜಕೀಯ ಸಂಬಂಧಗಳನ್ನು ತೋರಿಸಿ ಬೆದರಿಸುವ ಪ್ರಯತ್ನಗಳು ಇದೆಲ್ಲವೂ ಫಿಲ್ಮ್ ಸ್ಟೋರಿಗಳನ್ನು ಮೀರಿಸುವಂತಹದ್ದು. ಆದರೆ ಅಂತಿಮವಾಗಿ ಈ 'ಕಿಲಾಡಿ ಲೇಡಿ'ಯ ಪ್ರೇಮ ಪುರಾಣಕ್ಕೆ ತೆರೆ ಬಿದ್ದಿದ್ದು , ಆಕೆಯ ಬಂಧನದೊಂದಿಗೆ.

ಈ ಘಟನೆಯ ಹಿನ್ನೆಲೆಯನ್ನು ನೋಡುವುದಾದರೆ, ಸಂಜನಾ ತನ್ನನ್ನು ಕಾಂಗ್ರೆಸ್ ಕಾರ್ಯಕರ್ತೆಯೆಂದು ಪರಿಚಯಿಸಿಕೊಂಡಿದ್ದಳು. ಮುಖ್ಯಮಂತ್ರಿ (ಸಿಎಂ) ಮತ್ತು ಉಪಮುಖ್ಯಮಂತ್ರಿ (ಡಿಸಿಎಂ)ಗಳೊಂದಿಗೆ ತನಗೆ ಸಂಬಂಧಗಳಿವೆ ಎಂದು ಹೇಳಿ ಇನ್ಸ್‌ಪೆಕ್ಟರ್ ಸತೀಶ್ ಅವರನ್ನು ಬೆದರಿಸಲು ಪ್ರಯತ್ನಿಸಿದ್ದಳು. ಇದಲ್ಲದೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರೊಂದಿಗಿನ ಫೋಟೋಗಳನ್ನು ಕಳುಹಿಸಿ ತನ್ನ ರಾಜಕೀಯ ಪ್ರಭಾವವನ್ನು ತೋರಿಸಲು ಯತ್ನಿಸಿದ್ದಳು. ಆದರೆ ಇದೆಲ್ಲವೂ ಇನ್ಸ್‌ಪೆಕ್ಟರ್ ಅವರನ್ನು ತನ್ನ ಪ್ರೇಮಕ್ಕೆ ಒಪ್ಪಿಸುವ ಉದ್ದೇಶದಿಂದಲೇ ನಡೆದಿದ್ದು ಸ್ಪಷ್ಟವಾಗಿದೆ. ಸಂಜನಾ ಇನ್ಸ್‌ಪೆಕ್ಟರ್ ಸತೀಶ್ ಅವರಿಗೆ ಹಲವು ಬಾರಿ ಲವ್ ಲೆಟರ್‌ಗಳನ್ನು ಕಳುಹಿಸಿದ್ದಳು. "ಚಿನ್ನಿ ಲವ್ ಯೂ... ಯೂ ಮಸ್ಟ್ ಲವ್ ಮಿ... ಪ್ರೀತಿ ಮಾಡ್ತಿಯಾ?" ಎಂಬಂತಹ ಸಂದೇಶಗಳೊಂದಿಗೆ ಪ್ರಾರಂಭವಾದ ಈ ಕಾಟ, ಕ್ರಮೇಣ ತೀವ್ರಗೊಂಡಿತು.

ಒಂದು ಸಲ ರಕ್ತದಲ್ಲಿ ಬರೆದ ಪತ್ರವನ್ನು ಕಳುಹಿಸಿ, ಹಾರ್ಟ್ ಚಿತ್ರಗಳನ್ನು ರಚಿಸಿ ಪ್ರೇಮ ನಿವೇದನೆ ಮಾಡಿದ್ದಳು. "ನನ್ನ ಪ್ರೀತಿಯನ್ನು ನೀವು ಒಪ್ಪಿಕೊಳ್ಳದಿದ್ದರೆ, ನಾನು ಸೂಸೈಡ್ ಮಾಡಿಕೊಳ್ಳುತ್ತೇನೆ. ನನ್ನ ಸಾವಿಗೆ ನೀವೇ ಕಾರಣ" ಎಂದು ಬೆದರಿಕೆ ಹಾಕಿದ್ದಳು. ಇದರೊಂದಿಗೆ ನಿದ್ದೆ ಮಾತ್ರೆಗಳನ್ನು ಕೂಡ ಕಳುಹಿಸಿದ್ದಳು, ಇದು ಇನ್ಸ್‌ಪೆಕ್ಟರ್ ಅವರನ್ನು ಇನ್ನಷ್ಟು ಆತಂಕಕ್ಕೆ ದೂಡಿತು. ಇನ್ಸ್‌ಪೆಕ್ಟರ್ ಸತೀಶ್ ಇಲ್ಲದ ಸಮಯದಲ್ಲಿ ಕಜ್ಜಾಯ ಡಬ್ಬಿ ಮತ್ತು ಬೊಕ್ಕೆಯನ್ನು ಠಾಣೆಯಲ್ಲಿ ಇಟ್ಟು ಹೋಗಿದ್ದಳು. ಇದರಿಂದ ಠಾಣೆಯ ಸಿಬ್ಬಂದಿ ಗಾಬರಿಗೊಂಡಿದ್ದರು. ಅಲ್ಲದೆ, ಆಕೆಯು ಇನ್ಸ್‌ಪೆಕ್ಟರ್ ಅವರ ಮೊಬೈಲ್ ನಂಬರ್‌ಗೆ ಅಸಂಖ್ಯ ಕರೆಗಳನ್ನು ಮಾಡಿ ಕಿರುಕುಳ ನೀಡಿದ್ದಳು. ಇದರಿಂದಾಗಿ ಸತೀಶ್ ಅವರು ಆಕೆಯ ನಂಬರ್ ಅನ್ನು ಬ್ಲಾಕ್ ಮಾಡಿದ್ದರು. ಆದರೆ ಸಂಜನಾ ತನ್ನ ಕಿರುಕುಳವನ್ನು ನಿಲ್ಲಿಸಲಿಲ್ಲ. ಬದಲಿಗೆ, ಗೃಹ ಸಚಿವರ ಕಚೇರಿಯಿಂದಲೂ ದೂರು ಸ್ವೀಕರಿಸುವಂತೆ ಕರೆಗಳನ್ನು ಮಾಡಿಸಿದ್ದಳು ಎಂಬ ಆರೋಪವಿದ ಈ ಎಲ್ಲಾ ಘಟನೆಗಳ ಹಿನ್ನೆಲೆಯಲ್ಲಿ, ಸಂಜನಾ ಹಣ ಸಂಪಾದಿಸುವ ಉದ್ದೇಶದಿಂದಲೇ ಈ ಪ್ರೇಮದ ಆಟವನ್ನು ಆಡಿದ್ದಳು ಎಂಬ ಶಂಕೆಯಿದೆ. ಇನ್ಸ್‌ಪೆಕ್ಟರ್ ಅವರನ್ನು ಟ್ರ್ಯಾಪ್ ಮಾಡಿ ಹಣ ದೋಚುವ ಯೋಜನೆ ಇರಬಹುದು ಎಂದು ಪೊಲೀಸರು ಅಂದಾಜಿಸಿದ್ದಾರೆ. ಆದರೆ ಸಂಜನಾ ತನ್ನನ್ನು ನಿರಪರಾಧಿ ಎಂದು ಹೇಳಿಕೊಂಡಿದ್ದಳು. ಆದಾಗ್ಯೂ, ಇನ್ಸ್‌ಪೆಕ್ಟರ್ ಸತೀಶ್ ಅವರ ಕರ್ತವ್ಯಕ್ಕೆ ಅಡ್ಡಿಯಾಗುತ್ತಿದ್ದ ಈ ಕಿರುಕುಳ ಮತ್ತು ಆತ್ಮಹತ್ಯೆ ಬೆದರಿಕೆಯ ಆಧಾರದಲ್ಲಿ ರಾಮಮೂರ್ತಿನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಯಿತು.

ಕ್ರಿಮಿನಲ್ ಕೇಸ್ ನಡೆಸಿ ಸಂಜನಾ ವನಜಾ ಅವರನ್ನು ಬಂಧಿಸಲಾಯಿತು. ಈ ಘಟನೆ ಸಮಾಜದಲ್ಲಿ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಪ್ರೇಮದ ಹೆಸರಿನಲ್ಲಿ ಕಿರುಕುಳ ನೀಡುವುದು, ಬೆದರಿಕೆ ಹಾಕುವುದು ಮತ್ತು ರಾಜಕೀಯ ಸಂಬಂಧಗಳನ್ನು ದುರ್ಬಳಕೆ ಮಾಡಿಕೊಳ್ಳುವುದು ಇದೆಲ್ಲವೂ ಕಾನೂನುಬಾಹಿರ ಕೃತ್ಯಗಳು. ಪೊಲೀಸ್ ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಇಂತಹ ಅಡಚಣೆಗಳನ್ನು ಎದುರಿಸುತ್ತಾರೆ ಎಂಬುದು ಸ್ಪಷ್ಟವಾಗಿದೆ.

ಪೊಲೀಸರು ಇಂತಹ ಪ್ರಕರಣಗಳನ್ನು ಸೂಕ್ಷ್ಮವಾಗಿ ಹ್ಯಾಂಡಲ್ ಮಾಡುವುದು ಅಗತ್ಯ. ಸಂಜನಾ ಅವರ ಬಂಧನದ ನಂತರ ಠಾಣೆಯಲ್ಲಿ ಶಾಂತಿ ನೆಲೆಸಿದ್ದು , ಇನ್ಸ್‌ಪೆಕ್ಟರ್ ಸತೀಶ್ ಅವರು ತಮ್ಮ ಕರ್ತವ್ಯಕ್ಕೆ ಮರಳಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.


# ವಿಧಾನಸಭೆಯಲ್ಲಿ ಗ್ಯಾರಂಟಿ ಕೋಲಾಹಲ: ಕ್ಷಮೆಯಾಚಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ಬಿಜೆಪಿ ಶಾಸಕರು ಪ್ರತಿಭಟನೆ ನಡೆಸಿದ್ದಾರೆ. ಡಿಸೆಂಬರ್ 9ರಂದು ಸದನದಲ್ಲಿ ಸಚಿವೆ ಅವರು ಗೃಹಲಕ್ಷ್ಮೀ ಯೋಜನೆಯ ಹಣ ಆಗಸ್ಟ್ ತಿಂಗಳವರೆಗೆ ಬಿಡುಗಡೆಯಾಗಿದೆ ಎಂದು ಹೇಳಿದ್ದರು. ಆದರೆ ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಕಂತುಗಳು ಫಲಾನುಭವಿಗಳ ಖಾತೆಗೆ ಜಮೆಯಾಗಿಲ್ಲ ಎಂದು ಬಿಜೆಪಿ ಶಾಸಕ ಮಹೇಶ್ ಟೆಂಗಿನಕಾಯಿ ಅವರು ಅಧಿಕಾರಿಗಳಿಂದ ದಾಖಲೆಗಳನ್ನು ಪಡೆದು ಬಹಿರಂಗಪಡಿಸಿದ್ದಾರೆ.

ಈ ಆರೋಪದ ಹಿನ್ನೆಲೆಯಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸದನಕ್ಕೆ ಸುಳ್ಳು ಮಾಹಿತಿ ನೀಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸುಮಾರು 5,000 ಕೋಟಿ ರೂಪಾಯಿ ಬಾಕಿ ಉಳಿದಿದ್ದು, ಸರ್ಕಾರ ಬಡ ಮಹಿಳೆಯರನ್ನು ವಂಚಿಸುತ್ತಿದೆ ಎಂದು ಆರೋಪಿಸಿದ್ದಾರೆ. ಸಚಿವೆಯವರು ಕ್ಷಮೆಯಾಚಿಸದಿದ್ದರೆ ಧರಣಿ ನಡೆಸುವುದಾಗಿ ಬಿಜೆಪಿ ಎಚ್ಚರಿಕೆ ನೀಡಿದೆ. ಅಲ್ಲದೆ, ಸಚಿವೆಯವರು ಕಳೆದ ಕೆಲವು ದಿನಗಳಿಂದ ಸದನಕ್ಕೆ ಹಾಜರಾಗದಿರುವುದನ್ನು ಟೀಕಿಸಿ "ಮಿಸ್ಸಿಂಗ್" ಪೋಸ್ಟರ್‌ಗಳನ್ನು ಬಿಜೆಪಿ ಸಾಮಾಜಿಕ ಜಾಲತಾಣದಲ್ಲಿ ಬಿಡುಗಡೆ ಮಾಡಿದೆ. ಸದನದಲ್ಲಿ ಬಿಜೆಪಿ ಶಾಸಕರು "ಶೇಮ್ ಶೇಮ್" ಎಂದು ಘೋಷಣೆ ಕೂಗಿ ಪ್ರತಿಭಟನೆ ನಡೆಸಿ ಸಭಾತ್ಯಾಗ ಮಾಡಿದರು. ಆರ್. ಅಶೋಕ್ ಅವರು ಕ್ಷಮೆಯಾಚನೆಗೆ ಒತ್ತಾಯಿಸಿದರೆ, ಎಸ್. ಸುರೇಶ್ ಕುಮಾರ್ ಅವರು ಸಚಿವೆಯವರು ತಪ್ಪು ಮಾಹಿತಿ ನೀಡಿದ್ದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಶಾಸಕ ಆರಗ ಜ್ಞಾನೇಂದ್ರ ಅವರು ಅಧಿಕಾರಿಗಳು ಸಚಿವೆಯವರ ಬಾಯಲ್ಲಿ ಸುಳ್ಳು ಹೇಳಿಸುತ್ತಿದ್ದಾರೆ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಪಕ್ಷದಿಂದ ತೀಕ್ಷ್ಣ ತಿರುಗೇಟು ಬಂದಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗ್ಯಾರಂಟಿ ಯೋಜನೆಗಳು ಇಲ್ಲದಿದ್ದರೆ ಬಿಜೆಪಿ ಗೆಲ್ಲುತ್ತಿರಲಿಲ್ಲ ಎಂದು ಹೇಳಿ, ಕೇಂದ್ರ ಸರ್ಕಾರ ಜಿಎಸ್‌ಟಿ ಹಣ ಬಿಡುಗಡೆ ಮಾಡದಿದ್ದಕ್ಕೆ ವಿಳಂಬವಾಗುತ್ತಿದೆ ಎಂದು ಸಮರ್ಥಿಸಿಕೊಂಡರು. "ನಿಮ್ಮ ಕೇಂದ್ರ ಸರ್ಕಾರ ಘೋಷಿಸಿದ ಯೋಜನೆಗಳಲ್ಲಿ ಎಷ್ಟು ಹಣ ಕೊಟ್ಟಿದೆ?" ಎಂದು ಪ್ರಶ್ನಿಸಿದರು. ಸಚಿವ ಪ್ರಿಯಾಂಕ್ ಖರ್ಗೆ ಅವರು ಬಿಜೆಪಿ ಮತಗಳ ಕಳ್ಳತನ ಮಾಡುತ್ತದೆ ಎಂದು ಆರೋಪಿಸಿ ತಿರುಗೇಟು ನೀಡಿದರು. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ತಮ್ಮ ಉತ್ತರದಿಂದ ಯಾರಿಗೂ ನೋವಾಗುವ ಉದ್ದೇಶವಿಲ್ಲ ಎಂದು ಹೇಳಿ, ನೋವಾಗಿದ್ದರೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದು ಹೇಳಿದ್ದಾರೆ. ಆದರೆ ಬಿಜೆಪಿ ಇದನ್ನು ಸಾಲದು ಎಂದು ಬೇಷರತ್ ಕ್ಷಮೆಗೆ ಪಟ್ಟು ಹಿಡಿದಿದೆ. ಸ್ಪೀಕರ್ ಅವರು ಉತ್ತರ ಕೊಡೋಕೆ ಬಿಡಿ ಎಂದು ಹೇಳಿದರೂ



ಕೋಲಾಹಲ ಮುಂದುವರಿದಿದೆ.

ಈ ಘಟನೆಯಿಂದ ಸರ್ಕಾರ ದಿವಾಳಿಯಾಗಿದೆ ಎಂದು ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದ್ದು, ಕಾಂಗ್ರೆಸ್ ಸರ್ಕಾರ ನ್ಯಾಯಯುತವಾಗಿ ನಡೆಯುತ್ತಿಲ್ಲ ಎಂದು ಟೀಕಿಸಿದೆ. ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು 2,000 ರೂಪಾಯಿ ನೀಡುವ ಭರವಸೆಯನ್ನು ಕಾಂಗ್ರೆಸ್ ನೀಡಿತ್ತು. ಸುಮಾರು 1.26 ಕೋಟಿ ಮಹಿಳೆಯರು ಫಲಾನುಭವಿಗಳಾಗಿದ್ದಾರೆ. ಬಾಕಿ ಕಂತುಗಳು ಶೀಘ್ರ ಬಿಡುಗಡೆಯಾಗಬೇಕು ಎಂದು ಎಲ್ಲರ ಆಗ್ರಹವಿದೆ. ಈ ವಾಗ್ಯುದ್ಧದಿಂದ ಅಧಿವೇಶನದ ಕೆಲಸಕಾರ್ಯಗಳು ಅಡಚಣೆಯಾಗುತ್ತಿವೆ. ಮುಂದಿನ ದಿನಗಳಲ್ಲಿ ಈ ವಿವಾದ ಹೇಗೆ ಪರಿಹಾರವಾಗಲಿದೆ ಎಂಬುದನ್ನು ಕಾದು ನೋಡಬೇಕಿದೆ. ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್ ಸರ್ಕಾರದ ಮುಖ್ಯ ಆಯುಧವಾಗಿದ್ದು, ಇದರಲ್ಲಿನ ವಿಳಂಬಗಳು ರಾಜಕೀಯ ಚರ್ಚೆಗೆ ಕಾರಣವಾಗುತ್ತಿವೆ

# ಸುತ್ತೂರು ಮಠ ಸಾಮಾಜಿಕ-ಧಾರ್ಮಿಕ ಪ್ರಗತಿಯ ಚೇತನ: ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಶಂಸೆ



**ಮಂಡ್ಯ:** ಸುತ್ತೂರು ಮಠವು ಕೇವಲ ಧಾರ್ಮಿಕ ಕೇಂದ್ರವಲ್ಲ, ಅದು ಸಾವಿರ ವರ್ಷಗಳ ಇತಿಹಾಸವಿರುವ ದೇಶದ ಶ್ರೇಷ್ಠ ಸಾಮಾಜಿಕ ಮತ್ತು ಆಧ್ಯಾತ್ಮಿಕ ಶಕ್ತಿಯ ತಾಣವಾಗಿದೆ ಎಂದು ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ಆಯೋಜಿಸಲಾಗಿದ್ದ ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿ ಮಹಾಸ್ವಾಮೀಜಿಯವರ 1066ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮಠದ ಕುರಿತು ಮಾತನಾಡಿದ್ದಾರೆ.

**ಆದಿಜಗದ್ಗುರುಗಳ ಜೀವನ ಒಂದು ಸ್ಫೂರ್ತಿ**

ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ವ್ಯಕ್ತಿತ್ವವನ್ನು ಸ್ಮರಿಸಿದ ರಾಜ್ಯಪಾಲರು, ಅವರು ಭಾರತೀಯ ಸಂತ ಪರಂಪರೆಯ ಪ್ರಕಾಶಮಾನವಾದ ಸ್ತಂಭವಾಗಿದ್ದರು. ಅವರ ಸಂಪೂರ್ಣ ಜೀವನವು ತ್ಯಾಗ, ಕರುಣೆ ಮತ್ತು ಜನಕಲ್ಯಾಣಕ್ಕಾಗಿ ಮೀಸಲಾಗಿತ್ತು. ಶಿವಯೋಗ ಸಂಪ್ರದಾಯದ ಮೂಲಕ ಆತ್ಮಸಾಕ್ಷಾತ್ಕಾರ ಮತ್ತು ಸೇವೆಯನ್ನು ಸಾಮಾಜಿಕ ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿದರು. ಜಾತಿ ಮತ್ತು ವರ್ಗಗಳ ಸಂಕುಚಿತ ಬೇಲಿಗಳನ್ನು ಮೀರಿ ಸಮಾಜದಲ್ಲಿ ಸಮಾನತೆ ಮತ್ತು ಸಾಮರಸ್ಯವನ್ನು ಬಿತ್ತಿದ ಮಹಾನ್ ಚೇತನ ಅವರು ಎಂದು ಹೇಳಿದ್ದಾರೆ.


**ಜಾಗತಿಕ ಮಟ್ಟದಲ್ಲಿ ಸುತ್ತೂರು ಮಠದ ಸೇವೆ**

ಸುತ್ತೂರು ಮಠದ ಇಂದಿನ ಶ್ರೇಷ್ಠ ಪರಂಪರೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ರಾಜ್ಯಪಾಲರು, ಪ್ರಸ್ತುತ 24ನೇ ಜಗದ್ಗುರುಗಳಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರ ನಾಯಕತ್ವವನ್ನು ಶ್ಲಾಘಿಸಿ ಮಾತನಾಡಿದ ಅವರು, ಪೂಜ್ಯ ಶ್ರೀಗಳು ಮಠದ ಖ್ಯಾತಿಯನ್ನು ವಿಶ್ವದಾದ್ಯಂತ ವಿಸ್ತರಿಸಿದ್ದಾರೆ. ಕೇವಲ ಧಾರ್ಮಿಕ ಜ್ಞಾನಕ್ಕೆ ಸೀಮಿತವಾಗದೆ, ಆಧುನಿಕ ತಂತ್ರಜ್ಞಾನ ಮತ್ತು ಸುಸಜ್ಜಿತ ಶಿಕ್ಷಣವನ್ನು 350ಕ್ಕೂ ಹೆಚ್ಚು ಸಂಸ್ಥೆಗಳ ಮೂಲಕ ದೇಶ-ವಿದೇಶಗಳಲ್ಲಿ ಹರಡುತ್ತಿರುವುದು ನಿಜಕ್ಕೂ ಅತ್ಯುತ್ತಮ ಕಾರ್ಯವಾಗಿದೆ ಎಂದರು.

ಭಾರತೀಯ ಸಂಸ್ಕೃತಿಯ ಶಾಶ್ವತತೆಯ ಬಗ್ಗೆ ಮಾತನಾಡಿದ ಗೆಹ್ಲೋಟ್, ನಮ್ಮ ಸಂತರು ಮತ್ತು ಋಷಿಮುನಿಗಳು ಅನಾದಿ ಕಾಲದಿಂದಲೂ ನಮ್ಮ ಸಂಸ್ಕೃತಿಯನ್ನು ರಕ್ಷಿಸಿದ್ದಾರೆ. ಸಾರ್ವತ್ರಿಕ ಸಹೋದರತ್ವ ಮತ್ತು ಶಾಂತಿಯೇ ನಮ್ಮ ಸಂಸ್ಕೃತಿಯ ಮೂಲ ಮಂತ್ರವಾಗಿದೆ. ಇತ್ತೀಚಿನ ದಿನಗಳಲ್ಲಿ ಜಗತ್ತಿನ ಅನೇಕ ರಾಷ್ಟ್ರಗಳು ಮಾನಸಿಕ ನೆಮ್ಮದಿ ಮತ್ತು ಆಧ್ಯಾತ್ಮಿಕ ಯೋಗಕ್ಷೇಮಕ್ಕಾಗಿ ಭಾರತದತ್ತ ಮುಖ ಮಾಡಿವೆ ಎಂದು ಹೇಳಿದರು. ಆಧುನಿಕ ಜಗತ್ತಿನಲ್ಲಿ ಬಾಹ್ಯ ಪ್ರಗತಿಯ ಜೊತೆಗೆ ಆಂತರಿಕ ಶುದ್ಧತೆ ಮತ್ತು ಸಂಯಮ ಮುಖ್ಯ ಎಂದು ನೆನಪಿಸಿದ ಅವರು, 'ಸರ್ವೇ ಭವಂತು ಸುಖಿನಃ' ಎಂಬ ಮಂತ್ರದೊಂದಿಗೆ ಆದಿಜಗದ್ಗುರುಗಳಿಗೆ ಭಕ್ತಿಪೂರ್ವಕ ನಮನ ಅರ್ಪಿಸಿದರು. ಕಾರ್ಯಕ್ರಮದಲ್ಲಿ ಮಠದ ಪೂಜ್ಯರು, ಗಣ್ಯರು ಹಾಗೂ ಸಾವಿರಾರು ಭಕ್ತಾದಿಗಳು ಪಾಲ್ಗೊಂಡು ಜಯಂತ್ಯುತ್ಸವಕ್ಕೆ ಸಾಕ್ಷಿಯಾದರು.

# ಎಸ್ಕೇಪ್ ಆಗುತ್ತಿದ್ದ ರೌಡಿಶೀಟರ್‌ನ ಚೇಸ್ ಮಾಡಿ ಹಿಡಿದ ಪೊಲೀಸರು

**ಮಂಗಳೂರು**: ಪರಾರಿಯಾಗಲು ಯತ್ನಿಸಿದ್ದ ರೌಡಿಶೀಟರ್‌ನನ್ನು ಬೆನ್ನಟ್ಟಿ ಸಿನಿಮೀಯ ರೀತಿಯಲ್ಲಿ ಮೂಡಬಿದ್ರೆ ಪೊಲೀಸರು ಬಂಧಿಸಿದ್ದಾರೆ. ಕಲ್ಲಡ್ಕ ನಿವಾಸಿ ತೌಸೀಫ್ ಯಾನೆ ಪಪ್ಪಿ ಬಂಧಿತ ಆರೋಪಿ. ನಟೋರಿಯಸ್ ರೌಡಿ ತೌಸೀಫ್ ಮೂಡಬಿದ್ರೆ ಪರಿಸರದಲ್ಲಿ ಕಾರಿನಲ್ಲಿ ಸಂಚರಿಸುತ್ತಿದ್ದ ಬಗ್ಗೆ ಖಚಿತ ಮಾಹಿತಿ ಮೇರೆಗೆ ಪೊಲೀಸರು ಬಂಧನಕ್ಕೆ



ಮುಂದಾಗಿದ್ದರು.


ಮೂಡಬಿದ್ರೆ ಹೊರವಲಯದ ಕೊಡಂಗಲ್ಲು ಸಮೀಪ ತೌಸೀಫ್ ಬಂದಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕಿತು. ಆರೋಪಿಯ ಕಾರನ್ನು ಪೊಲೀಸ್ ಇನ್ಸ್‌ಪೆಕ್ಟರ್ ಸಂದೇಶ್ ಪಿ.ಜಿ. ಹಿಂಬಾಲಿಸಿದ್ದರು. ಪೊಲೀಸರು ಹಿಂಬಾಲಿಸುತ್ತಿರುವ ಬಗ್ಗೆ ಅರಿತ ತೌಸೀಫ್ ತನ್ನ ಕಾರನ್ನು ಅತಿ ವೇಗದಲ್ಲಿ ಹಿಮ್ಮುಖವಾಗಿ ಚಲಾಯಿಸಿ ಎಸ್ಕೇಪ್ ಆಗಲು ಯತ್ನಿಸಿದ್ದ.

ಆತುರದಲ್ಲಿ ಚರಂಡಿಗೆ ಬಿದ್ದು ಕಾರು ಸಿಲುಕಿಕೊಂಡಿತು. ಅಲ್ಲಿಂದ ಪರಾರಿಯಾಗಲು ಯತ್ನಿಸಿದ ತೌಸೀಫ್‌ನನ್ನು ಸಿನಿಮೀಯ ರೀತಿಯಲ್ಲಿ ಪೊಲೀಸರು ಬಂಧಿಸಿದ್ದಾರೆ. ಕಾರಿನಲ್ಲಿ ತಲವಾರ್ ಹಾಗೂ MDMA ವಶಪಡಿಸಿಕೊಂಡಿದ್ದಾರೆ.

# ಕಮಿಟ್ ಆದ ಕ್ಷಣದಿಂದಲೇ ಕಥೆ ಕ್ಲೋಸ್

ಆನ್‌ಲೈನ್ ಮ್ಯಾಟ್ರಿಮೋನಿ ಸೈಟ್‌ಗಳು ಇತ್ತೀಚೆಗೆ ಜೀವನ ಸಂಗಾತಿಯನ್ನು ಹುಡುಕುವ ಸುಲಭ ಮಾರ್ಗ. ಆದರೆ ಇದೇ ಸೈಟ್‌ಗಳು ಕೆಲವೊಮ್ಮೆ ವಂಚಕರ ಕೈಯಲ್ಲಿ ಸಿಕ್ಕಿಹಾಕಿಕೊಂಡು ಅಮಾಯಕರನ್ನು ಬಲಿಪಶು ಮಾಡುತ್ತಿವೆ. ಇತ್ತೀಚಿನ ಒಂದು ಘಟನೆಯಲ್ಲಿ, ಸುಂದರ ಯುವತಿಯ ಫೋಟೋ ಮತ್ತು ಮಧುರ ಧ್ವನಿಯನ್ನು ಬಳಸಿ ಮೂವರು ಬ್ಯಾಚುಲರ್ ಯುವಕರನ್ನು ಬಲೆಗೆ ಬೀಳಿಸಿ ಸುಮಾರು 1.5 ಕೋಟಿ ರೂಪಾಯಿ ವಂಚಿಸಲಾಗಿದೆ. ಈ ಕಥೆ ಬ್ಯಾಚುಲರ್ ಹುಡುಗರಿಗೆ ಎಚ್ಚರಿಕೆಯ ಗಂಟೆಯಾಗಿದೆ. ಹುಡುಗಿ 'ಸೂಪರ್' ಎಂದು ಕಮಿಟ್ ಆದರೆ ನಿಮ್ಮ ಕಥೆ ಮುಗಿತ್ತು ಹುಷಾರ್.

ಘಟನೆಯ ಹಿನ್ನೆಲೆಯನ್ನು ನೋಡುವುದಾದರೆ, ಮೂವರು ಯುವಕರು ಮ್ಯಾಟ್ರಿಮೋನಿ ಸೈಟ್‌ಗಳಲ್ಲಿ ತಮ್ಮ ಜೀವನ ಸಂಗಾತಿಯನ್ನು ಹುಡುಕುತ್ತಿದ್ದರು. ಅದೇ ಸಮಯದಲ್ಲಿ 'ಕಾರುಣ್ಯ' ಎಂಬ ಹೆಸರಿನ ಪ್ರೊಫೈಲ್ ಅವರ ಗಮನ ಸೆಳೆಯಿತು. ಸುಂದರ ಯುವತಿಯ ಫೋಟೋಗಳು, ಆಕರ್ಷಕ ವಿವರಣೆಗಳು ಮತ್ತು ಮಧುರ ಸ್ವರದಲ್ಲಿ ಮಾತನಾಡುವ ಧ್ವನಿ ಇದೆಲ್ಲವೂ ಯುವಕರನ್ನು ಮಂತ್ರಮುಗ್ಧಗೊಳಿಸಿತು. ಮೊದಲು ಸಾಮಾನ್ಯ ಚಾಟ್‌ನಿಂದ ಆರಂಭವಾದ ಸಂಭಾಷಣೆ ಕ್ರಮೇಣ



ನಿಕಟ ತೆಯತ್ತ ಸಾಗಿ ತು. "ಪರಿಚಯ ಮಾಡಿ ಕೊಂಡು ಸ್ನೇಹ ಬೆಳೆಸಿ, ಹಣಕ್ಕೆ ಸ್ಕೆಚ್ ಹಾಕು ವುದು" ಇದು ವಂಚಕರ ತಂತ್ರ ವಾಗಿತ್ತು. ಯುವತಿ (ಅಥವಾ ವಂಚ ಕರು) ಯುವಕರೊಂದಿಗೆ ಸ್ವೀಟ್ ಸ್ವೀಟ್ ಟಾಕ್ ಮಾಡಿ ವಿಶ್ವಾಸ ಗಳಿಸಿದರು. "ಮದುವೆಯ ನಂತರ ನಮ್ಮ ಜೀವನ ಚೆನ್ನಾಗಿರುತ್ತದೆ, ನೀನು ಸಂತೋಷವಾಗಿರಬೇಕು" ಎಂದು ಭರವಸೆ ನೀಡಿ, ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡುವಂತೆ ಒತ್ತಾಯಿಸಿದರು. ಒಬ್ಬ ಯುವಕನಿಗೆ 50 ಲಕ್ಷ, ಮತ್ತೊಬ್ಬನಿಗೆ 60 ಲಕ್ಷ ಮತ್ತು ಮೂರನೇಯವನಿಗೆ 40 ಲಕ್ಷ ರೂಪಾಯಿ ಹೂಡಿಕೆ ಮಾಡಿಸಿ ವಂಚಿಸಲಾಗಿದೆ.

ಒಟ್ಟು 1.5 ಕೋಟಿ ರೂಪಾಯಿ ಮೋಸ ಹೋಗಿದೆ. ಯುವತಿಯ ಧ್ವನಿ ಮತ್ತು ಫೋಟೋಗಳು ನಕಲಿಯಾಗಿದ್ದವು ಬಹುಶಃ ಡೀಪ್‌ಫೇಕ್ ಅಥವಾ ಇತರ ತಂತ್ರಜ್ಞಾನ ಬಳಸಿ ರಚಿಸಲಾಗಿತ್ತು. ಈ ಮೋಸದ ಹಿಂದೆ ಒಂದು ಸಂಘಟಿತ ಗ್ಯಾಂಗ್ ಇದೆ ಎಂಬ ಶಂಕೆಯಿದೆ. ವಂಚಕರು ಮ್ಯಾಟ್ರಿಮೋನಿ ಸೈಟ್‌ಗಳಲ್ಲಿ ನಕಲಿ ಪ್ರೊಫೈಲ್‌ಗಳನ್ನು ರಚಿಸಿ, ಬ್ಯಾಚುಲರ್ ಯುವಕರನ್ನು ಟಾರ್ಗೆಟ್ ಮಾಡುತ್ತಾರೆ. ಮೊದಲು ಭಾವನಾತ್ಮಕ ಬಂಧನ ಬೆಳೆಸಿ, ನಂತರ ಹಣಕಾಸು ಸಲಹೆಗಳ ಮೂಲಕ ಹೂಡಿಕೆಗೆ ಪ್ರೇರೇಪಿಸುತ್ತಾರೆ. ಈ ಕೇಸ್‌ನಲ್ಲಿ ಮೂವರು ಯುವಕರು ಒಂದೇ 'ಕಾರುಣ್ಯ' ಪ್ರೊಫೈಲ್‌ಗೆ ಬಲಿಯಾಗಿದ್ದಾರೆ. ಅವರಲ್ಲಿ ಒಬ್ಬರು ಮೋಸದ ಅರಿವಾದ ನಂತರ ಸೆನ್ ಠಾಣೆಯಲ್ಲಿ (ಮಹಾರಾಷ್ಟ್ರದ ಸೆನ್ ಪೊಲೀಸ್ ಠಾಣೆ) ದೂರು ದಾಖಲಿಸಿದ್ದಾರೆ. ಪೊಲೀಸರು ಸೈಬರ್ ಕ್ರೈಮ್ ವಿಭಾಗದೊಂದಿಗೆ ತನಿಖೆ ಆರಂಭಿಸಿದ್ದಾರೆ.

ಈ ಘಟನೆ ಸೈಬರ್ ವಂಚನೆಯ ಹೆಚ್ಚುತ್ತಿರುವ ಪ್ರಕರಣಗಳನ್ನು ಬೆಳಕಿಗೆ ತರುತ್ತದೆ. ಭಾರತದಲ್ಲಿ ಮ್ಯಾಟ್ರಿಮೋನಿ ಸೈಟ್‌ಗಳು ಲಕ್ಷಾಂತರ ಬಳಕೆದಾರರನ್ನು ಹೊಂದಿವೆ, ಆದರೆ ನಕಲಿ ಪ್ರೊಫೈಲ್‌ಗಳು ಮತ್ತು ವಂಚನೆಗಳು ಸಾಮಾನ್ಯವಾಗಿವೆ. ಸೈಬರ್ ತಜ್ಞರ ಪ್ರಕಾರ, ವಂಚಕರು ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಬಳಸಿ ನಕಲಿ ಧ್ವನಿ ಮತ್ತು ವಿಡಿಯೋಗಳನ್ನು ರಚಿಸುತ್ತಾರೆ. ಯುವಕರು ಭಾವನಾತ್ಮಕವಾಗಿ ಬಲೆಗೆ ಬೀಳುವುದು ಸುಲಭವಾಗಿದೆ. "ಹುಡುಗಿ ಕ್ಯೂಟ್ ಎಂದು ಚಾಟ್ ಮಾಡಿ ಬೆಪ್ಪಾಗುತ್ತಾರೆ, ಆದರೆ ಹಿಂದೆ ವಂಚಕರ ಜಾಲವಿರುತ್ತದೆ" ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ.

# ಮೆಸ್ಸಿ ಕಾರ್ಯಕ್ರಮದಲ್ಲಿ ಅವ್ಯವಸ್ಥೆ: ಬಂಗಾಳ ಕ್ರೀಡಾ ಸಚಿವ ಅರೂಪ್ ಬಿಸ್ವಾಸ್ ರಾಜೀನಾಮೆ

**ಕೋಲ್ಕತ್ತಾ:** ವಿಶ್ವ ಫುಟ್‌ಬಾಲ್‌ನ ಲೆಜೆಂಡ್ ಲಿಯೋನೆಲ್ ಮೆಸ್ಸಿ ಅವರ ಭಾರತ ಪ್ರವಾಸದ ವೇಳೆ ಕೋಲ್ಕತ್ತಾದ ಸಾಲ್ಟ್ ಲೇಕ್ ಕ್ರೀಡಾಂಗಣದಲ್ಲಿ ಸಂಭವಿಸಿದ ಭಾರೀ ಅವ್ಯವಸ್ಥೆ ಈಗ ಹೊಸ ತಿರುವು ಪಡೆದುಕೊಂಡಿದೆ. ಕಾರ್ಯಕ್ರಮವನ್ನು ಸಮರ್ಪಕವಾಗಿ ಆಯೋಜಿಸಲು ವಿಫಲವಾದ ಹಿನ್ನೆಲೆಯಲ್ಲಿ ತೀವ್ರ ಟೀಕೆಗೆ ಗುರಿಯಾಗಿದ್ದ ಪಶ್ಚಿಮ ಬಂಗಾಳದ ಕ್ರೀಡಾ ಸಚಿವ ಅರೂಪ್ ಬಿಸ್ವಾಸ್ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ತಕ್ಷಣವೇ ಅದನ್ನು ಅಂಗೀಕರಿಸಿದ್ದಾರೆ. ಡಿಸೆಂಬರ್ 13ರಂದು ನಡೆದ ಬಹುನಿರೀಕ್ಷಿತ 'GOAT' ಕಾರ್ಯಕ್ರಮದಲ್ಲಿ ಮೆಸ್ಸಿಯನ್ನು ನೋಡಲು ಸಾವಿರಾರು ಅಭಿಮಾನಿಗಳು ದುಬಾರಿ ಬೆಲೆಯ ಟಿಕೆಟ್ ಖರೀದಿಸಿ ಸ್ಟೇಡಿ ಯಂಗೆ ಆಗಮಿ ಸಿದ್ದರು. ನಿಗದಿತ ಕಾರ್ಯಕ್ರಮದ ಪ್ರಕಾರ ಮೆಸ್ಸಿ ಮೈದಾನದ ಸುತ್ತಲೂ ಪ್ರದಕ್ಷಿಣೆ ಬರಬೇಕಿತ್ತು. ಆದರೆ, ಕಾರ್ಯಕ್ರಮದಲ್ಲಿ ಉಂಟಾದ ಭೀಕರ ಅವ್ಯವಸ್ಥೆಯಿಂದಾಗಿ ಮೆಸ್ಸಿ ಕೇವಲ 10 ನಿಮಿಷಗಳಲ್ಲಿ ಮೈದಾನದಿಂದ ಹೊರನಡೆದರು.




ಸಾವಿರಾರು ರೂಪಾಯಿ ನೀಡಿ ಮೆಸ್ಸಿಯ ಆಟ ಅಥವಾ ಕನಿಷ್ಠ ಅವರ ಮುಖವನ್ನಾದರೂ ಹತ್ತಿರದಿಂದ ನೋಡಬಹುದು ಎಂದು ಕಾದು ಕುಳಿತಿದ್ದ ಅಭಿಮಾನಿಗಳಿಗೆ ಇದು ತೀವ್ರ ನಿರಾಸೆ ತಂದಿತು. ನಾವು ಮೆಸ್ಸಿಯನ್ನು ನೋಡಲೇ ಇಲ್ಲ, ಕೇವಲ ರಾಜಕಾರಣಿಗಳು ಮಾತ್ರ ಅವರ ಜೊತೆ ಫೋಟೋ ತೆಗೆಸಿಕೊಂಡು ಹ್ಯಾಂಡ್‌ಶೇಕ್ ಮಾಡಿದರು ಎಂದು ಅಭಿಮಾನಿಗಳು ಆಕ್ರೋಶ ಹೊರಹಾಕಿದರು.

ಮೆಸ್ಸಿ ಹೊರನಡೆಯುತ್ತಿದ್ದಂತೆ ಆಕ್ರೋಶಗೊಂಡ ಅಭಿಮಾನಿಗಳು ಸಾಲ್ಟ್ ಲೇಕ್ ಕ್ರೀಡಾಂಗಣದಲ್ಲಿ ದಾಂಧಲೆ ನಡೆಸಿದರು. ಸ್ಟೇಡಿಯಂನ ಕುರ್ಚಿಗಳನ್ನು ಕಿತ್ತೆಸೆದಿದ್ದಲ್ಲದೆ, ನೀರಿನ ಬಾಟಲಿಗಳನ್ನು ಮೈದಾನದೊಳಕ್ಕೆ ಎಸೆದು ಪ್ರತಿಭಟನೆ ನಡೆಸಿದರು. ಈ ಹಿನ್ನೆಲೆಯಲ್ಲಿ ಕಾರ್ಯಕ್ರಮದ ಪ್ರಮುಖ ಸಂಘಟಕ ಶತಾದ್ರು ದತ್ತ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಕೋಲ್ಕತ್ತಾದಲ್ಲಿನ ಈ ಘಟನೆ ನಂತರ ಮೆಸ್ಸಿ ಹೈದರಾಬಾದ್, ಮುಂಬೈ ಮತ್ತು ದೆಹಲಿಗೆ ತೆರಳಿದ್ದರು. ಅಚ್ಚರಿಯೆಂದರೆ ಈ ನಗರಗಳಲ್ಲಿ ಯಾವುದೇ ಗೊಂದಲವಿಲ್ಲದೆ ಅತ್ಯಂತ ಅಚ್ಚುಕಟ್ಟಾಗಿ ಕಾರ್ಯಕ್ರಮಗಳು ನಡೆದವು. ಕೋಲ್ಕತ್ತಾದಲ್ಲಾದ ಈ ಘಟನೆಯಿಂದ ಇದು ಪಶ್ಚಿಮ ಬಂಗಾಳ ಸರ್ಕಾರಕ್ಕೆ ಮತ್ತು ಕ್ರೀಡಾ ಇಲಾಖೆಗೆ ಮುಖಭಂಗವಾಯಿತು. ವಿರೋಧ ಪಕ್ಷಗಳು ಮತ್ತು ಕ್ರೀಡಾ ಪ್ರೇಮಿಗಳಿಂದ ಸತತ ಒತ್ತಡ ಕೇಳಿಬಂದ ಹಿನ್ನೆಲೆಯಲ್ಲಿ ಅರೂಪ್ ಬಿಸ್ವಾಸ್ ತಮ್ಮ ವೈಫಲ್ಯದ ಹೊಣೆ ಹೊತ್ತು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪಶ್ಚಿಮ ಬಂಗಾಳ ಸರ್ಕಾರವು ಈ ಕುರಿತು ಆಂತರಿಕ ತನಿಖೆಗೂ ಆದೇಶಿಸಿದೆ.

# ಮಠದ ಆವರಣದಲ್ಲೇ ಸ್ವಾಮೀಜಿಯ ಬೆತ್ತಲೆ ಸ್ನಾನ..ಬೆತ್ತಲೆ ಮಸಾಜ್

**ಉತ್ತರ ಕರ್ನಾಟಕ**: ಧಾರವಾಡ ಜಿಲ್ಲೆಯ ಕವಲಗೇರಿ ಗ್ರಾಮದ ಶಿವಾನಂದ ಮಠದ ಸರಸ್ವತಿ ಸ್ವಾಮೀಜಿಯವರ ಅತ್ಯಂತ ಖಾಸಗಿ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಮಠದ ಆವರಣದಲ್ಲೇ ಯುವತಿಯೊಬ್ಬರು ಸ್ವಾಮೀಜಿಗೆ ಬೆತ್ತಲೆಯಾಗಿ ಸ್ನಾನ ಮಾಡಿಸಿ, ಬಾಡಿ ಮಸಾಜ್ ನೀಡುತ್ತಿರುವ ದೃಶ್ಯಗಳು ವಿಡಿಯೋದಲ್ಲಿವೆ.



ಈ ದೃಶ್ಯಗಳು ಸಾರ್ವಜನಿಕರಲ್ಲಿ ಆಘಾತ ಮೂಡಿಸಿದ್ದು, ಸ್ಥಳೀಯ ಗ್ರಾಮಸ್ಥರು ಸ್ವಾಮೀಜಿಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ವಾಮೀಜಿಯವರ ಪರವಾಗಿ ಮಾತನಾಡುವ ಮೂಲಗಳ ಪ್ರಕಾರ, ಈ ವಿಡಿಯೋ ಹನಿಟ್ರಾಪ್ ಗ್ಯಾಂಗ್‌ನ ಕೃತ್ಯವಾಗಿದೆ. ಯುವತಿಯನ್ನು ಮಠಕ್ಕೆ ಕಳುಹಿಸಿ ಸ್ವಾಮೀಜಿಯವರ ಖಾಸಗಿ ಕ್ಷಣಗಳನ್ನು ರಹಸ್ಯ ಕ್ಯಾಮೆರಾದ ಮೂಲಕ ಚಿತ್ರೀಕರಿಸಲಾಗಿತ್ತು. ನಂತರ ಗ್ಯಾಂಗ್ ಸ್ವಾಮೀಜಿಯವರನ್ನು ಬ್ಲ್ಯಾಕ್‌ಮೇಲ್ ಮಾಡಿ ಮೊದಲು 20 ಲಕ್ಷ ರೂಪಾಯಿ ಡಿಮ್ಯಾಂಡ್ ಮಾಡಿತ್ತು. ಡೀಲ್ ನಂತರ 10 ಲಕ್ಷಕ್ಕೆ ಒಪ್ಪಿಗೆ ಸಿಕ್ಕಿ, ಸ್ವಾಮೀಜಿ ಕಡೆಯಿಂದ ಸುಮಾರು 7 ಲಕ್ಷ ರೂಪಾಯಿ ಪಾವತಿಯಾಗಿತ್ತು. ಬಾಕಿ 3 ಲಕ್ಷ ಕೊಡದ ಕಾರಣ ಗ್ಯಾಂಗ್ ವಿಡಿಯೋವನ್ನು ವೈರಲ್ ಮಾಡಿದೆ ಎಂಬ ಆರೋಪವಿದೆ. ಸ್ವಾಮೀಜಿಯವರು ಈ ಬಗ್ಗೆ ಜೆಎಂಎಫ್‌ಸಿ ಕೋರ್ಟ್‌ನಲ್ಲಿ ಮತ್ತು ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಹನಿಟ್ರಾಪ್ ಗ್ಯಾಂಗ್ ವಿರುದ್ಧ ದೂರು ದಾಖಲಿಸಿದ್ದಾರೆ. ಬ್ಲ್ಯಾಕ್‌ಮೇಲ್ ಮಾಡಿದ ಐವರ ತಂಡದ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಪೊಲೀಸರು ತನಿಖೆ ಆರಂಭಿಸಿದ್ದು, ಆರೋಪಿಗಳನ್ನು ಬಂಧಿಸುವ ಕಾರ್ಯಾಚರಣೆ ನಡೆಯುತ್ತಿದೆ. ಕವಲಗೇರಿ ಗ್ರಾಮದ ಶಿವಾನಂದ ಮಠವು ಗ್ರಾಮಸ್ಥರ ಆಧ್ಯಾತ್ಮಿಕ ಕೇಂದ್ರವಾಗಿತ್ತು. ಆದರೆ ಈ ವಿಡಿಯೋ ವೈರಲ್ ಆದ ಬಳಿಕ ಭಕ್ತರು ಮತ್ತು ಸ್ಥಳೀಯರು ತೀವ್ರ ನಿರಾಶೆ ವ್ಯಕ್ತಪಡಿಸಿದ್ದಾರೆ. ಮಠವನ್ನು ಮಸಾಜ್ ಪಾರ್ಲರ್ ಆಗಿ ಬಳಸಿಕೊಂಡಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ. ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂದು ಗ್ರಾಮಸ್ಥರು ಛೀಮಾರಿ ಹಾಕಿದ್ದಾರೆ. ಕರ್ನಾಟಕದಲ್ಲಿ ಹನಿಟ್ರಾಪ್ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ. ರಾಜಕಾರಣಿಗಳು, ಸ್ವಾಮೀಜಿಯರು ಸೇರಿದಂತೆ ಪ್ರಮುಖರನ್ನು ಟಾರ್ಗೆಟ್ ಮಾಡಿ ವಿಡಿಯೋ ಚಿತ್ರೀಕರಿಸಿ ಬ್ಲ್ಯಾಕ್‌ಮೇಲ್ ಮಾಡುವ ಗ್ಯಾಂಗ್‌ಗಳು ಸಕ್ರಿಯವಾಗಿವೆ. ಈ ಪ್ರಕರಣದಲ್ಲಿ ಸ್ವಾಮೀಜಿ ಬಲಿಯಾಗಿದ್ದಾರೆ ಎಂಬುದು ತನಿಖೆಯಿಂದ ಬಯಲಾಗಲಿದೆ. ಪೊಲೀಸ್ ತನಿಖೆಯಿಂದ ಸತ್ಯ ಬಯಲಾಗಲಿ ಮತ್ತು ತಪ್ಪಿತಸ್ಥರು ಶಿಕ್ಷೆಗೆ ಒಳಗಾಗಲಿ ಎಂಬುದು ಸಾರ್ವಜನಿಕ ಅಭಿಪ್ರಾಯ.


### ಚಲಿಸುತ್ತಿದ್ದ ಕಾರಿನಲ್ಲಿ ಆಕಸ್ಮಿಕ ಅಗ್ನಿ ಅವಘಡ, ಉದ್ಯಮಿ ಸಜೀವ ದಹನ

**ನೋಯ್ಡಾ**: ಚಲಿಸುತ್ತಿದ್ದ ಕಾರಿನಲ್ಲಿ ದಿಢೀರನೆ ಕಾಣಿಸಿಕೊಂಡ ಬೆಂಕಿಯಿಂದಾಗಿ, ಕಾರಿನಿಂದ ಹೊರಬರಲಾಗದೆ 46 ವರ್ಷದ ಉದ್ಯಮಿಯೊಬ್ಬರು ಕಾರಿನೊಳಗೆ ಸುಟ್ಟು ಕರಕಲಾದ ಘಟನೆ ಉತ್ತರ ಪ್ರದೇಶದ ಗೌತಮ್ ಬುದ್ಧ ನಗರ ಜಿಲ್ಲೆಯಲ್ಲಿ ನಡೆದಿದೆ. ಮೃತರನ್ನು ಬಣ್ಣದ ವ್ಯವಹಾರ ನಡೆಸುತ್ತಿದ್ದ ರಾಜ್ ಕುಮಾರ್ ಸಿಂಘಾಲ್ ಎಂದು ಗುರುತಿಸಲಾಗಿದೆ. ತಡರಾತ್ರಿ ಸಿಂಘಾಲ್ ಅವರು ತಮ್ಮ ಕೆಲಸ ಮುಗಿಸಿ ಪಾರ್ಥಲಾ ಚೌಕ್ ಕಡೆಗೆ ತಮ್ಮ ಕಾರಿನಲ್ಲಿ ಪ್ರಯಾಣಿಸುತ್ತಿದ್ದರು. ಸೆಕ್ಟರ್ 113 ಪೊಲೀಸ್ ಠಾಣೆ ವ್ಯಾಪ್ತಿಯ ಸೋರ್ಖಾ ಗ್ರಾಮದ ಸಮೀಪ ಕಾರು ಚಲಿಸುತ್ತಿದ್ದಾಗ, ಏಕಾಏಕಿ ಇಂಜಿನ್ ಭಾಗದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಹೊಗೆಯಿಂದ ಕಾರಿನಲ್ಲೇ ಉಸಿರುಬಿಟ್ಟ ಉದ್ಯಮಿ ಬೆಂಕಿ ಕ್ಷಣಾರ್ಧದಲ್ಲಿ ಇಡೀ ಕಾರನ್ನು ಆವರಿಸಿಕೊಂಡಿದೆ. ಕಾರಿನ ಸೆಂಟ್ರಲ್ ಲಾಕಿಂಗ್ ವ್ಯವಸ್ಥೆ ಜಾಮ್ ಆಗಿದೆ ಅಥವಾ ಬೆಂಕಿಯ ಹೊಗೆಯಿಂದ ಉದ್ಯಮಿ ಪ್ರಜ್ಞೆ ತಪ್ಪಿ ಕಾರಿನಲ್ಲೇ ಉಳಿದಿದ್ದಾರೆ ಎಂದು ಪೊಲೀಸರು ಶಂಕಿಸಿದ್ದಾರೆ. ಕಾರಿನ ಬಾಗಿಲು ತೆರೆಯಲು ಸಾಧ್ಯವಾಗದೆ ಅವರು ಒಳಗೆ ಸಿಲುಕಿಕೊಂಡಿದ್ದಾರೆ. ಬಳಿಕ ರಸ್ತೆಯಲ್ಲಿದ್ದ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಪೊಲೀಸ್ ಮತ್ತು ಅಗ್ನಿಶಾಮಕ ದಳದ ಕಾರ್ಯಾಚರಣೆ: ಮಾಹಿತಿ ತಿಳಿದ ತಕ್ಷಣ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಆದರೆ,ಪೊಲೀಸಲು ಸ್ಥಳಕ್ಕೆ ಬರುವ ಮೊದಲೇ ಕಾರು ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ. ಘಟನೆಯಲ್ಲಿ ಸಿಂಘಾಲ್ ಅವರು ಕಾರಿನ ಸೀಟಿನಲ್ಲೇ ಸುಟ್ಟು ಕರಕಲಾಗಿದ್ದರು. ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಂದಿಸಿದ ನಂತರ, ಕಾರಿನೊಳಗಿದ್ದ ಮೃತದೇಹವನ್ನು ಹೊರತೆಗೆಯಲಾಯಿತು. ಬೆಂಕಿ ವೇಗವಾಗಿ ಹರಡಲು ಕಾರಣವೇನು ಘಟನಾ ಸ್ಥಳಕ್ಕೆ ಭೇಟಿ ನೀಡಿದ ಸ್ಟೇಷನ್ ಹೌಸ್ ಅಧಿಕಾರಿ ಕೃಷ್ಣ ಗೋಪಾಲ್ ಶರ್ಮಾ ಮಾತನಾಡಿ, ಪ್ರಕರಣದ ತನಿಖೆ ನಡೆಯುತ್ತಿದೆ. ಮೃತರು ಬಣ್ಣದ ವ್ಯಾಪಾರಿಯಾಗಿದ್ದರಿಂದ, ಕಾರಿನೊಳಗೆ ಬಣ್ಣದ ಡಬ್ಬಿಗಳು ಅಥವಾ ಇತರ ಸುಲಭವಾಗಿ ಬೆಂಕಿ ಹತ್ತಿಕೊಳ್ಳುವ ರಾಸಾಯನಿಕ ವಸ್ತುಗಳು ಇದ್ದಿರಬಹುದು.

# ಹಾಸ್ಟೆಲ್‌ನಲ್ಲಿ ಹಠಾತ್ ಹೃದಯಾಘಾತದಿಂದ 22 ವರ್ಷದ ವಿದ್ಯಾರ್ಥಿನಿ ಸಾ ವು

ಕರ್ನಾಟಕದಲ್ಲಿ ಯುವಕ-ಯುವತಿಯರಲ್ಲಿ ಹೃದಯಾಘಾತದ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿರುವಂತೆಯೇ ಮತ್ತೊಂದು ದುರಂತ ಘಟನೆ ನಡೆದಿದೆ. ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಪಟ್ಟಣದಲ್ಲಿ ಬಿಕಾಂ ಅಂತಿಮ ವರ್ಷ ವ್ಯಾಸಂಗ ಮಾಡುತ್ತಿದ್ದ 22 ವರ್ಷದ ವಿದ್ಯಾರ್ಥಿನಿ ದಿಶಾ ಅವರು ಹಠಾತ್ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಈ ಘಟನೆ ಕಾಲೇಜು ಸಹಪಾಠಿಗಳು, ಶಿಕ್ಷಕರು ಮತ್ತು ಕುಟುಂಬದಲ್ಲಿ ತೀವ್ರ ದುಃಖವನ್ನು ತಂದೊಡ್ಡಿದೆ. ಮೃತ ವಿದ್ಯಾರ್ಥಿನಿ ದಿಶಾ ಅವರು ಮೂಲತಃ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನವರು. ಶೃಂಗೇರಿಯ ಜೆಸಿಬಿಎಂ ಕಾಲೇಜಿನಲ್ಲಿ ಬಿಕಾಂ ಡಿಗ್ರಿ ಪೂರ್ಣಗೊಳಿಸುತ್ತಿದ್ದ ಅವರು, ಕಾಲೇಜಿನ ಬಿಎಂಸಿ (BCM) ಹಾಸ್ಟೆಲ್‌ನಲ್ಲಿ ವಾಸಿಸುತ್ತಿದ್ದರು. ಡಿಸೆಂಬರ್ 16ರಂದು ಹಾಸ್ಟೆಲ್ ಕೊಠಡಿಯಲ್ಲಿ ಇದ್ದಕ್ಕಿದ್ದಂತೆ ತೀವ್ರ ಎದೆ ನೋವು ಕಾಣಿಸಿಕೊಂಡಿದೆ.

ಸಹಪಾಠಿಗಳು ಗಮನಿಸಿ ತಕ್ಷಣ ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗದಲ್ಲಿ ಅಥವಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ದಿಶಾ ಕೊನೆಯುಸಿರೆಳೆದಿದ್ದಾರೆ ಎಂದು ತಿಳಿದುಬಂದಿದೆ. ಈ ಘಟನೆಯು ರಾಜ್ಯದಲ್ಲಿ ಯುವ ವಯಸ್ಸಿನವರಲ್ಲಿ ಹೃದಯಾಘಾತದ ಪ್ರಕರಣಗಳು ಹೆಚ್ಚುತ್ತಿರುವುದಕ್ಕೆ ಮತ್ತೊಂದು ಉದಾಹರಣೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಒತ್ತಡ, ಅನಿಯಮಿತ ಆಹಾರ ಸೇವನೆ, ವ್ಯಾಯಾಮದ ಕೊರತೆ, ಆನುವಂಶಿಕ ಕಾರಣಗಳು ಸೇರಿದಂತೆ ಹಲವು ಅಂಶಗಳು ಯುವಕರಲ್ಲಿ ಹೃದಯ ಸಂಬಂಧಿ ಸಮಸ್ಯೆಗಳನ್ನು ಉಂಟುಮಾಡುತ್ತಿವೆ ಎಂದು ವೈದ್ಯರು ಎಚ್ಚರಿಕೆ ನೀಡುತ್ತಿದ್ದಾರೆ. ದಿಶಾ ಅವರಂತೆ ಎಳೆಯ ವಯಸ್ಸಿನಲ್ಲಿ ಹೃದಯಾಘಾತದಿಂದ ಸಾವು



ಸಂಭವಿಸುವುದು ಕುಟುಂಬಕ್ಕೆ ಮಾತ್ರವಲ್ಲದೆ ಸಮಾಜಕ್ಕೂ ಆಘಾತಕಾರಿಯಾಗಿದೆ.

ದಿಶಾ ಅವರು ಉತ್ತಮ ವಿದ್ಯಾರ್ಥಿನಿಯಾಗಿದ್ದು, ಕಾಲೇಜಿನಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದರು ಎಂದು ಸಹಪಾಠಿಗಳು ತಿಳಿಸಿದ್ದಾರೆ. ಘಟನೆಯ ನಂತರ ಹಾಸ್ಟೆಲ್ ಮತ್ತು ಕಾಲೇಜಿನಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ. ಶೃಂಗೇರಿ ಪೊಲೀಸರು ಘಟನೆಯ ಬಗ್ಗೆ ಮಾಹಿತಿ ಸಂಗ್ರಹಿಸಿ, ಅನಪೇಕ್ಷಿತ ಮರಣ ಪ್ರಕರಣ ದಾಖಲಿಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಲಾಗಿದ್ದು, ಹೃದಯಾಘಾತವೇ ಸಾವಿಗೆ ಕಾರಣ ಎಂದು ಪೋಸ್ಟ್‌ಮಾರ್ಟಂ ವರದಿ ದೃಢಪಡಿಸಿದೆ. ವೈದ್ಯಕೀಯ ತಜ್ಞರ ಪ್ರಕಾರ, ಆಧುನಿಕ ಜೀವನಶೈಲಿ, ಕೆಲಸದ ಒತ್ತಡ, ಅನಾರೋಗ್ಯಕರ ಆಹಾರ (ಜಂಕ್ ಫುಡ್), ಧೂಮಪಾನ, ಮದ್ಯ ಸೇವನೆ, ನಿದ್ರೆಯ ಕೊರತೆ, ಮಾನಸಿಕ ಒತ್ತಡ ಮತ್ತು ಕೋವಿಡ್ ನಂತರದ ಪರಿಣಾಮಗಳು ಯುವಕರಲ್ಲಿ ಹೃದಯ ಸಮಸ್ಯೆಗಳನ್ನು ಹೆಚ್ಚಿಸುತ್ತಿವೆ. ಇತ್ತೀಚೆಗೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಇಂತಹ ಪ್ರಕರಣಗಳು ವರದಿಯಾಗುತ್ತಿವೆ. ಉದಾಹರಣೆಗೆ, ಹಾಸನ, ಮೈಸೂರು, ಬೆಳಗಾವಿ ಸೇರಿದಂತೆ ಹಲವೆಡೆ ಯುವಕ-ಯುವತಿಯರು ಹೃದಯಾಘಾತಕ್ಕೆ ಬಲಿಯಾಗಿದ್ದಾರೆ. ಈ ದುರಂತದಿಂದ ಪಾಠ ಕಲಿತು, ಯುವಕರು ನಿಯಮಿತ ವ್ಯಾಯಾಮ, ಆರೋಗ್ಯಕರ ಆಹಾರ, ಒತ್ತಡ ನಿರ್ವಹಣೆ ಮತ್ತು ವಾರ್ಷಿಕ ಆರೋಗ್ಯ ತಪಾಸಣೆ ಮಾಡಿಕೊಳ್ಳುವುದು ಅತ್ಯಗತ್ಯ. ಎದೆ ನೋವು, ಉಸಿರಾಟದ ತೊಂದರೆ, ತಲೆಸುತ್ತು ಸೇರಿದಂತೆ ಯಾವುದೇ ಲಕ್ಷಣಗಳು ಕಂಡರೆ ತಕ್ಷಣ ವೈದ್ಯಕೀಯ ಸಹಾಯ ಪಡೆಯಿರಿ.

# ಪವನ್ ಕಲ್ಯಾಣ್ ಕಡೆಯಿಂದ ಭರ್ಜರಿ ಉಡುಗೊರೆ: 'OG' ನಿರ್ದೇಶಕನಿಗೆ ಐಷಾರಾಮಿ ಕಾರು

**ಹೈದರಾಬಾದ್**: ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ತಾವು ನಟಿಸಿರುವ OG' ಚಿತ್ರದ ನಿರ್ದೇಶಕ ಸುಜಿತ್‌ಗೆ ಬರೋಬ್ಬರಿ 3 ಕೋಟಿ ರೂಪಾಯಿ ಮೌಲ್ಯದ ಲ್ಯಾಂಡ್ ರೋವರ್ ಡಿಫೆಂಡರ್ ಕಾರನ್ನು ಗಿಫ್ಟ್ ಆಗಿ ನೀಡಿದ್ದಾರೆ. ಸಾಮಾನ್ಯವಾಗಿ ಇಂತಹ ದುಬಾರಿ ಗಿಫ್ಟ್‌ಗಳನ್ನು ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ನೂರಾರು ಕೋಟಿ ಕೊಳ್ಳೆ ಹೊಡೆದಾಗ ನೀಡಲಾಗುತ್ತದೆ. ಆದರೆ, ಪವನ್ ಕಲ್ಯಾಣ್ ಮತ್ತು ಸುಜಿತ್ ಕಾಂಬಿನೇಶನ್‌ನ 'OG' ಚಿತ್ರವು ಕಳೆದ ಸೆಪ್ಟೆಂಬರ್‌ನಲ್ಲಿ ತೆರೆಕಂಡಿತ್ತು. ಈ ಸಿನಿಮಾ ನಿರೀಕ್ಷಿತ ಮಟ್ಟದಲ್ಲಿ ಬ್ಲಾಕ್‌ಬಸ್ಟರ್ ಹಿಟ್ ಆಗಿರಲಿಲ್ಲ ಮತ್ತು ಬಾಕ್ಸ್ ಆಫೀಸ್‌ನಲ್ಲಿ ಸಾಧಾರಣ ಪ್ರದರ್ಶನ ಕಂಡಿತ್ತು. ಆದರೂ, ಪವನ್ ಕಲ್ಯಾಣ್ ಅವರು ಚಿತ್ರದ ಮೇಕಿಂಗ್ ಮತ್ತು ನಿರ್ದೇಶಕ ಸುಜಿತ್ ಅವರ ಕೆಲಸದ ಶೈಲಿಯನ್ನು ಮೆಚ್ಚಿ ಈ ಐಷಾರಾಮಿ ಕಾರನ್ನು ಉಡುಗೊರೆಯಾಗಿ ನೀಡಿದ್ದಾರೆ. ಪವನ್ ಕಲ್ಯಾಣ್ ಡಿವಿವಿ ಎಂಟರ್ಟೈನ್ಮೆಂಟ್ಸ್ ಈ ಚಿತ್ರವನ್ನು ನಿರ್ಮಿಸಿತ್ತು. ಸಾಮಾನ್ಯವಾಗಿ ನಿರ್ಮಾಪಕರು ನೀಡಬೇಕಾದ ಉಡುಗೊರೆಯನ್ನು ಸ್ವತಃ ನಾಯಕ ನಟನೇ ನೀಡಿರುವುದು ಪವನ್ ಕಲ್ಯಾಣ್ ಅವರ ದೊಡ್ಡಗುಣಕ್ಕೆ ಸಾಕ್ಷಿಯಾಗಿದೆ. ಪವನ್ ಕಲ್ಯಾಣ್ ಅವರ ಈ ನಡೆ ಸದ್ಯ ಟಾಲಿವುಡ್ ಅಂಗಳದಲ್ಲಿ ಸಂಚಲನ ಮೂಡಿಸಿದೆ. ನಿರ್ದೇಶಕ ಸುಜಿತ್ ಅವರು ಪವನ್ ಕಲ್ಯಾಣ್ ಅವರನ್ನು ತೆರೆಯ ಮೇಲೆ ತೋರಿಸಿದ ರೀತಿ ಮತ್ತು ಆಕ್ಷನ್ ಸೀಕ್ವೆನ್ಸ್‌ಗಳ ವಿನ್ಯಾಸಕ್ಕೆ ಪವರ್ ಸ್ಟಾರ್ ಫಿದಾ ಆಗಿದ್ದಾರೆ ಎನ್ನಲಾಗಿದೆ. ರಾಜಕೀಯ ಕೆಲಸಗಳ ನಡುವೆಯೂ ಸಿನೆಮಾ ಶೂಟಿಂಗ್ ಪೂರ್ಣಗೊಳಿಸಲು ಸುಜಿತ್ ನೀಡಿದ ಸಹಕಾರ ಮತ್ತು ಚಿತ್ರದ ಮೇಲಿನ ಅವರ ಬದ್ಧತೆಯನ್ನು ಗೌರವಿಸಿ ಪವನ್ ಈ ನಿರ್ಧಾರ ಕೈಗೊಂಡು ನಿರ್ದೇಶಕ ಸುಜಿತ್‌ಗೆ ಕಾರು ಉಡುಗೊರೆಯಾಗಿ ನೀಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.